ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಕನ್ನಡ ಮಾಸಪತ್ರಿಕೆ

# ಸಹಕಾರ

ಮಾಸ ಪತ್ರಿಕೆ

ಕರ್ನಾಟಕ ರಾಜ್ಯ
ಸಹಕಾರ ಪತ್ತಿನ ಸಂಘಗಳ
ಮಹಾಮಂಡಳದ ಪ್ರಕಟಣೆ

ಸಂಪುಟ : 4 । ಸಂಚಿಕೆ : 11 । ನವೆಂಬರ್ - 2022 । ಪುಟಗಳು : 20 । ಬೆಲೆ : 25/-



ನಾಡಿನ ಸಮಸ್ತ ಜನತೆಗೆ
ಕನ್ನಡ ರಾಜ್ಯೋತ್ಸವದ
ಶುಭಾಶಯಗಳು

ದಿ. ಡಾ. ಪುನೀತ್‌ರಾಜ್‌ಕುಮಾರ್ ಅವರಿಗೆ
ಕರ್ನಾಟಕ ರತ್ನ ಪ್ರಶಸ್ತಿ



## 69ನೇ ಅಖಿಲ ಭಾರತ ಸಹಕಾರ ಸಪ್ತಾಹ 2022





GeM
Government
e Marketplace

Efficient • Transparent • Inclusive





ನವೆಂಬರ್ 14 ರಿಂದ 20, 2022

ಧ್ಯೇಯ : "ಭಾರತ @ 75 – ಸಹಕಾರ ಸಂಸ್ಥೆಗಳ ಬೆಳವಣಿಗೆ ಮತ್ತು ಮುಂದಿನ ಭವಿಷ್ಯ"

# 69ನೇ ಅಖಿಲ ಭಾರತ ಸಹಕಾರ ಸಪ್ತಾಹದ ಧ್ಯೇಯ

## 69th All India Cooperative Week

**ನವೆಂಬರ್ 14 ರಿಂದ 20, 2022, November 14 to 20, 2022**

**ಧ್ಯೇಯ : "ಭಾರತ @ 75 – ಸಹಕಾರ ಸಂಸ್ಥೆಗಳ ಬೆಳವಣಿಗೆ ಮತ್ತು ಮುಂದಿನ ಭವಿಷ್ಯ"**

**Theme : "India @ 75 - Growth of Cooperatives and Future Ahead"**





| | |
|---|---|
| **14.11.2022**<br>**ಸೋಮವಾರ**<br>**ಕಲ್ಬುರ್ಗಿ** | ಸಹಕಾರ ಸಂಸ್ಥೆಗಳಲ್ಲಿ ವ್ಯಾಪಾರ ಸರಳೀಕರಣ, ರಫ್ತು ವೃದ್ಧಿಗಾಗಿ ಜೆಮ್–ಪೋರ್ಟಲ್ ಬಳಕೆ<br>Ease-of-doing Business for Cooperatives, GeM and Export Promotion. |
| **15.11.2022**<br>**ಮಂಗಳವಾರ**<br>**ಧಾರವಾಡ** | ಸಹಕಾರ ಮಾರುಕಟ್ಟೆ, ಗ್ರಾಹಕ, ರೂಪಾಂತರ ಮತ್ತು ಮೌಲ್ಯವರ್ಧನೆ<br>Cooperative Marketing, Consumers, Processing and Value addition. |
| **16.11.2022**<br>**ಬುಧವಾರ**<br>**ಬೆಳಗಾವಿ** | ಸಹಕಾರ ಶಿಕ್ಷಣ, ವೃತ್ತಿಪರ ನಿರ್ವಹಣೆಯನ್ನು ಮುಖ್ಯವಾಹಿನಿಗೆ ತರಲು ಪುನರ್ ನಿರ್ಮಿಸುವುದು<br>Mainstreaming Cooperative Education, Professional Management and Re-orienting Training. |
| **17.11.2022**<br>**ಗುರುವಾರ**<br>**ಚಿಕ್ಕಮಗಳೂರು** | ಆವಿಷ್ಕಾರ ಪೋಷಣೆ, ಸ್ಟಾರ್ಟ್ ಅಪ್‌ಗಳಿಗೆ ಉತ್ತೇಜನ ಮತ್ತು ತಂತ್ರಜ್ಞಾನದ ಉನ್ನತೀಕರಣದಲ್ಲಿ ಸಹಕಾರ ಸಂಸ್ಥೆಗಳ ಪಾತ್ರ<br>Role of Cooperatives in Fostering Innovation, Promoting Start-Ups, and Technology Up gradation. |
| **18.11.2022**<br>**ಶುಕ್ರವಾರ**<br>**ಮಂಗಳೂರು** | ಉದ್ಯಮಶೀಲತೆ ಅಭಿವೃದ್ಧಿ, ಸಾರ್ವಜನಿಕ – ಖಾಸಗಿ – ಸಹಕಾರಿ ಸಹಭಾಗಿತ್ವವನ್ನು ಬಲಗೊಳಿಸುವುದು<br>Entrepreneurship Development and Strengthening Public-Private Cooperative Partnership. |
| **19.11.2022**<br>**ಶನಿವಾರ**<br>**ಬೆಂಗಳೂರು** | ಯುವಜನ, ಮಹಿಳೆ, ಅಬಲವರ್ಗ ಮತ್ತು ಆರೋಗ್ಯಕ್ಕಾಗಿ ಸಹಕಾರ ಸಂಸ್ಥೆ<br>Cooperative for Youth, Women, Weaker Sections and Health. |
| **20.11.2022**<br>**ಭಾನುವಾರ**<br>**ಮೈಸೂರು** | ಆರ್ಥಿಕ ಸೇರ್ಪಡೆ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಸ್ಥೆಗಳ ಡಿಜಿಟಲೀಕರಣ ಮತ್ತು ಸಹಕಾರ ಸಂಸ್ಥೆಗಳ ದತ್ತಾಂಶವನ್ನು ಬಲಪಡಿಸುವುದು.<br>Financial inclusion, Digitalization of PACS and Strengthening Cooperative Database. |

# ನೂತನ ರಾಷ್ಟ್ರೀಯ ಸಹಕಾರ ನೀತಿ
# ಕರಡು ಸಿದ್ಧತೆ ಕುರಿತು ವ್ಯಾಪಕ ಸಮಾಲೋಚನೆ
# ರಾಜ್ಯದ ಸಹಕಾರಾಭಿವೃದ್ಧಿ ಬಗ್ಗೆ ಸುರೇಶ್ ಪ್ರಭು ಶ್ಲಾಘನೆ



**ಬೆಂಗಳೂರು** : ಸಹಕಾರ ಕ್ಷೇತ್ರವನ್ನು ಬಲಪಡಿಸಿ ಸಮಗ್ರ ಅಭಿವೃದ್ಧಿಗಾಗಿ ನೂತನ ಸಹಕಾರ ನೀತಿ ರಚಿಸಲಾಗುತ್ತಿದ್ದು, ಅದಕ್ಕೆ ಎಲ್ಲಾ ಸಹಕಾರಿಗಳ ಸಹಕಾರ ಅವಶ್ಯಕವಾಗಿದೆ ಎಂದು ಕೇಂದ್ರ ಮಾಜಿ ಸಚಿವರು ಹಾಗೂ ಹೊಸ ರಾಷ್ಟ್ರೀಯ ಸಹಕಾರ ನೀತಿ ಕರಡು ಸಮಿತಿಯ ಅಧ್ಯಕ್ಷರಾದ ಸುರೇಶ್ ಪ್ರಭು ಅವರು ತಿಳಿಸಿದರು.

ಅಕ್ಟೋಬರ್ 18 ರಂದು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದಲ್ಲಿ ಆಯೋಜಿಸಲಾಗಿದ್ದ ಹೊಸ ರಾಷ್ಟ್ರೀಯ ಸಹಕಾರ ನೀತಿ ಕರಡು ಸಿದ್ಧತಾ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಮುಂದುವರೆದು ಮಾತನಾಡಿದ ಅವರು, ಕರ್ನಾಟಕದಲ್ಲಿ ಸಹಕಾರ ವಿವಿಧ ವಲಯ ಉತ್ತಮ ಸಾಧನೆ ಮಾಡಿದ್ದು ಇಲ್ಲಿ ಹಿರಿಯ ಸಹಕಾರಿಗಳ ಪ್ರಯತ್ನ, ಮಾರ್ಗದರ್ಶನ ಉತ್ತಮವಾಗಿದೆ. ಹಾಗಾಗಿ ಸಹಕಾರ ನೀತಿಯ ಬಗ್ಗೆ ಅರಿವಿದ್ದು, ಆ ಸಲಹೆಗಳನ್ನು ನೀಡಿದ್ದೇ ಆದಲ್ಲಿ ಸಹಕಾರ ನೀತಿಯ ರಚನೆಗೆ ಮಾರ್ಗದರ್ಶನವಾಗುತ್ತದೆ. ಸಹಕಾರ ವಲಯದಲ್ಲಿ ಸಮಸ್ಯೆಗಳು ಇರುವಷ್ಟೇ ಸಾಧನೆಯನ್ನು ಕೂಡ ಭಾರತ ಮಾಡಿದ್ದು, ಇವೆರಡನ್ನು ಗಮನದಲ್ಲಿಟ್ಟುಕೊಂಡು ಸಹಕಾರ ನೀತಿಯನ್ನು ರಚನೆ ಮಾಡಬೇಕಾಗುತ್ತದೆ. ಸಹಕಾರ ಕ್ಷೇತ್ರದಲ್ಲಿ ಹಲವಾರು ರೀತಿಯ ಸವಾಲುಗಳಿದ್ದು, ಅವುಗಳನ್ನು ಎದುರಿಸಲು ಸಹಕಾರ ನೀತಿಯ ಅನುಷ್ಠಾನ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಸಭೆಯಲ್ಲಿ ಉಪಸ್ಥಿತರಿದ್ದ ಸಹಕಾರ ಸಚಿವರಾದ ಎಸ್.ಟಿ. ಸೋಮಶೇಖರ್ ಅವರು ಮಾತನಾಡಿ, ಸಹಕಾರ ಕ್ಷೇತ್ರದ ಸಮಗ್ರ ಬೆಳವಣಿಗೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಪ್ರಸ್ತಾಪಿಸಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ. ದೇವೇಗೌಡ ಅವರು ಮಾತನಾಡಿ, ಖಾಸಗೀಕರಣ, ಜಾಗತೀಕರಣ ಹಾಗೂ ಉದಾರೀಕರಣ ನೀತಿಯಿಂದಾಗಿ ಇಂದು ಟಿಎಪಿಸಿಎಂಎಸ್‌ಗಳು ನಷ್ಟದ ಹಂತವನ್ನು ತಲುಪಿದ್ದು, ಖಾಸಗಿಯವರೊಂದಿಗೆ ಸ್ಪರ್ಧೆ ನೀಡಲು ಅವುಗಳಿಗೆ ಸಾಧ್ಯವಾಗುತ್ತಿಲ್ಲ. ಇದರ ಜೊತೆಗೆ ಆದಾಯ ತೆರಿಗೆ ನೀತಿ ಸಹಕಾರ ಸಂಸ್ಥೆಗಳ ಬೆಳವಣಿಗೆಗೆ ಮಾರಕವಾಗಿದ್ದು, ಸಹಕಾರ ತತ್ವಗಳ




ಆಧಾರದ ಮೇಲೆ ನಡೆಯುವ ಈ ಸಂಸ್ಥೆಗಳಿಗೆ ತೆರಿಗೆ ವಿನಾಯಿತಿ ನೀಡುವುದು ಕೂಡ ಮುಖ್ಯವಾಗುತ್ತದೆ ಎಂದರು.

ಸಹಕಾರ ವಿಷಯದಲ್ಲಿ ಅಧ್ಯಯನ ಮಾಡಿದವರಿಗೆ ಆದ್ಯತೆಯ ಮೇರೆಗೆ ಸಹಕಾರ ಸಂಘ ಸಂಸ್ಥೆಗಳ ನೇಮಕಾತಿಯಲ್ಲಿ ಮೀಸಲಾತಿ ನೀಡುವುದರಿಂದ ಸಹಕಾರ ವಲಯದಲ್ಲಿ ವೃತ್ತಿಪರತೆಯ ಜೊತೆಗೆ ಬೆಳವಣಿಗೆಗೆ ಪೂರಕವಾಗುತ್ತದೆ. ಈ ಕಾರಣಗಳಿಂದ ನೂತನ ಸಹಕಾರ ನೀತಿಯಲ್ಲಿ ಈ ವಿಷಯವನ್ನು ಸೇರಿಸಬೇಕೆಂದು ವಿವರಿಸಿ, ಸುರೇಶ್ ಪ್ರಭು ಅವರಿಗೆ ರಾಜ್ಯದ ಎಲ್ಲಾ ಸಹಕಾರಿಗಳ ಪರವಾಗಿ ಮನವಿ ಸಲ್ಲಿಸಿದರು.

ಸಭೆಯಲ್ಲಿ ಕರ್ನಾಟಕ ರಾಜ್ಯ ಮಾರಾಟ ಮಹಾಮಂಡಳದ ಅಧ್ಯಕ್ಷರಾದ ಡಾ. ಎಂ.ಎನ್. ರಾಜೇಂದ್ರ ಕುಮಾರ್, ಸಹಕಾರ ಮಹಾಮಂಡಳ ನಿರ್ದೇಶಕರಾದ ಜಿ.ಪಿ. ಪಾಟೀಲ್, ಬಿ.ಡಿ. ಭೂಕಾಂತ್, ಸಹಕಾರ ಇಲಾಖೆಯ ಪ್ರಧಾನ ಕಾರ್ಯದರ್ಶಿ ಎಸ್. ಆರ್. ಉಮಾಶಂಕರ್, ಸಹಕಾರ ಸಂಘಗಳ ನಿಬಂಧಕರಾದ ಕ್ಯಾಪ್ಟನ್ ಕೆ. ರಾಜೇಂದ್ರ, ಕೆ.ಎಂ.ಎಫ್. ನ ವ್ಯವಸ್ಥಾಪಕ ನಿರ್ದೇಶಕರಾದ ಬಿ.ಸಿ. ಸತೀಶ್, ಅಪರ ನಿಬಂಧಕರಾದ ಕೆ.ಎಸ್. ನವೀನ್, ಕೆ.ಎಂ. ಆಶಾ, ಎ.ಸಿ. ದಿವಾಕರ್, ಆರ್. ಶ್ರೀಧರ್, ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಎಸ್. ಅರಳಿ ಸೂರ್ಯಕಾಂತ್, ಕಾರ್ಯದರ್ಶಿ ಲಕ್ಷ್ಮೀಪತಯ್ಯ ಹಾಗೂ ಜಂಟಿ ನಿಬಂಧಕರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.


SAHAKARA VARTHA PATHRIKE KANNADA MONTHLY
RNI-Reg No. : KARKAN/2018/75796
Post Reg No. : KA-BGW/1816/2022-2024
License to post without prepayment
PMG BG/WPP-405/2022-2024
Posting Date : 1 & 5, Every Month
Posted at : Patrika Chanel RMS Bhavan, Bangalore PSO,
Blore - 26, Published on : 31th of Previouse Month

# ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಆಡಳಿತ ಮಂಡಳಿ


ಶಿದ್ದನಗೌಡ ಸಂಣರಾಮನಗೌಡ ಪಾಟೀಲ
ಸಹಕಾರಿ ಪಿತಾಮಹ


ಶ್ರೀ ಬಿ.ಎಲ್. ಲಕ್ಕೇಗೌಡರು
ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಸಂಸ್ಥಾಪಕ ಅಧ್ಯಕ್ಷರು


ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ
ಅಧ್ಯಕ್ಷರು


ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ
ಉಪಾಧ್ಯಕ್ಷರು


ಶ್ರೀ ಸಿ.ಎಂ. ಮಾರೇಗೌಡ
ನಿರ್ದೇಶಕರು


ಡಾ. ಬಿ.ಡಿ. ಭೂಕಾಂತ
ನಿರ್ದೇಶಕರು


ಶ್ರೀ ವಿ. ರಾಜು
ನಿರ್ದೇಶಕರು


ಡಾ. ಸಂಜಯ ಪಂ. ಹೊಸಮಠ
ನಿರ್ದೇಶಕರು


ಶ್ರೀ ಎಂ.ಜೆ. ನರೇಂದ್ರ ಕುಮಾರ
ನಿರ್ದೇಶಕರು


ಶ್ರೀ ಡಿ. ಚನ್ನಯ್ಯ
ನಿರ್ದೇಶಕರು


ಶ್ರೀ ಕೆ. ಕೃಷ್ಣಮೂರ್ತಿ
ನಿರ್ದೇಶಕರು


ಶ್ರೀ ಜಿ. ಮಲ್ಲಿಕಾರ್ಜುನಯ್ಯ
ನಿರ್ದೇಶಕರು



ಶ್ರೀ ತಮ್ಮಣ್ಣ ಬಿ. ಕೆಂಚರಡ್ಡಿ
ನಿರ್ದೇಶಕರು


ಶ್ರೀ ಧರೇಪ್ಪ ಎಂ. ಅಲಗೂರ
ನಿರ್ದೇಶಕರು


ಶ್ರೀ ಗುರುಪಾದಪ್ಪಗೌಡ ಬಿ. ಪಾಟೀಲ
ನಿರ್ದೇಶಕರು


ಶ್ರೀ ಹೊನ್ನಯ್ಯ ವಿ. ಹಿರೇಮಠ
ನಿರ್ದೇಶಕರು


ಶ್ರೀ ಪಿ.ಕೆ. ಜಯಕೃಷ್ಣೇಗೌಡ
ನಿರ್ದೇಶಕರು


ಶ್ರೀ ಶೇಖರಗೌಡ ಮಾಲಿ ಪಾಟೀಲ
ನಿರ್ದೇಶಕರು


ಶ್ರೀ ಹೆಚ್.ಟಿ. ನಾಗೇಶ್
ನಿರ್ದೇಶಕರು


ಶ್ರೀ ಡಿ.ಆರ್. ನಾಗೇಶಪ್ಪ
ನಿರ್ದೇಶಕರು


ಶ್ರೀ ಉಮೇಶ ಶಿ ಬಾಳಿ
ನಿರ್ದೇಶಕರು


ಶ್ರೀ ರವೀಂದ್ರ ಪ್ರಲ್ಹಾದ ಕಲಬುರ್ಗಿ
ನಿರ್ದೇಶಕರು


ಶ್ರೀ ಚಿತ್ತರಂಜನ್ ಬೋಳಾರ್
ನಿರ್ದೇಶಕರು


ಶ್ರೀಮತಿ ಪಿ.ಆಶಾಲತಾ
ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರ)

ಇಂದ : ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು
ನಂ.16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003

Printed at : Biligiri Printers
Chamrajpet, Bengaluru - 18.
mobile: 9738380945

ಸಂಪಾದಕೀಯ



**ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ**
ಅಧ್ಯಕ್ಷರು

**ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಸಹಕಾರ ಕ್ಷೇತ್ರವೂ ಮಹತ್ವದ ಪಾತ್ರ ವಹಿಸಿದೆ. ಕೃಷಿ ಪತ್ತು, ಬ್ಯಾಂಕಿಂಗ್, ಕೃಷಿಯೇತರ ಪತ್ತು, ಹೈನುಗಾರಿಕೆ ವಲಯಗಳು ಉತ್ತಮ ಸೇವೆ ಮೂಲಕ ಪರಿಣಾಮಕಾರಿ ಸಂಸ್ಥೆಗಳಾಗಿ ಕಾರ್ಯನಿರ್ವಹಿಸುತ್ತಿವೆ. ಸಹಕಾರ ಕ್ಷೇತ್ರ ಆರ್ಥಿಕವಾಗಿ ಹಿಂದುಳಿದ ಜನರನ್ನು ಸಬಲರನ್ನಾಗಿ ಮಾಡಲು ಸರ್ಕಾರದ ನೆರವು ಸಹ ಪೋಷಕವಾಗಿದೆ. ಆದ್ದರಿಂದ ಸಹಕಾರ ಅಭಿವೃದ್ಧಿಗೆ ಸರ್ಕಾರದ ಎಲ್ಲ ರೀತಿಯ ನೆರವು ಅಗತ್ಯವಿದ್ದು ಇದರಿಂದ ದುರ್ಬಲ ವಲಯದ ಸಹಕಾರ ಸಂಸ್ಥೆಗಳನ್ನು ಪೋಷಿಸಿ ಸದಸ್ಯ ಗ್ರಾಹಕ ಸ್ನೇಹಿಯಾಗಿ ಮಾಡಬೇಕಾದ ಅನಿವಾರ್ಯತೆ ಇದೆ.**

# 69ನೇ ಅಖಿಲ ಭಾರತ ಸಹಕಾರ ಸಪ್ತಾಹ ಪರಿಣಾಮಕಾರಿಯಾಗಿರಲಿ–ಯಶಸ್ವಿಯಾಗಲಿ

ಭಾರತ ಸಹಕಾರ ಚಳವಳಿ ವಿಶ್ವದಲ್ಲಿಯೇ ಬೃಹತ್ತಾದುದು. ದೇಶದಲ್ಲಿ 8.5ಕೋಟಿ ಸಹಕಾರ ಸಂಘಗಳು ಅಂದಾಜು 30 ಕೋಟಿ ಸದಸ್ಯರ ಅಗತ್ಯತೆಗಳನ್ನು ಪೂರೈಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ. ಪ್ರತಿವರ್ಷದಂತೆ ಈ ವರ್ಷವೂ ದೇಶದೆಲ್ಲೆಡೆ 69ನೇ ಅಖಿಲ ಭಾರತ ಸಹಕಾರ ಸಪ್ತಾಹವನ್ನು ಸಹಕಾರಿಗಳೆಲ್ಲರೂ ವಿಜೃಂಭಣೆಯಿಂದ ಅರ್ಥಪೂರ್ಣವಾಗಿ ಆಚರಿಸುತ್ತಿದ್ದಾರೆ.

ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಸಹಕಾರ ಕ್ಷೇತ್ರವೂ ಮಹತ್ವದ ಪಾತ್ರ ವಹಿಸಿದೆ. ಕೃಷಿ ಪತ್ತು, ಬ್ಯಾಂಕಿಂಗ್, ಕೃಷಿಯೇತರ ಪತ್ತು, ಹೈನುಗಾರಿಕೆ ವಲಯಗಳು ಉತ್ತಮ ಸೇವೆ ಮೂಲಕ ಪರಿಣಾಮಕಾರಿ ಸಂಸ್ಥೆಗಳಾಗಿ ಕಾರ್ಯನಿರ್ವಹಿಸುತ್ತಿವೆ. ಸಹಕಾರ ಕ್ಷೇತ್ರ ಆರ್ಥಿಕವಾಗಿ ಹಿಂದುಳಿದ ಜನರನ್ನು ಸಬಲರನ್ನಾಗಿ ಮಾಡಲು ಸರ್ಕಾರಗಳ ನೆರವು ಸಹ ಪೋಷಕವಾಗಿದೆ. ಆದ್ದರಿಂದ ಸಹಕಾರ ಅಭಿವೃದ್ಧಿಗೆ ಸರ್ಕಾರದ ಎಲ್ಲ ರೀತಿಯ ನೆರವು ಅಗತ್ಯವಿದ್ದು, ಇದರಿಂದ ದುರ್ಬಲ ವಲಯದ ಸಹಕಾರ ಸಂಸ್ಥೆಗಳನ್ನು ಪೋಷಿಸಿ ಸದಸ್ಯ – ಗ್ರಾಹಕ ಸ್ನೇಹಿಯಾಗಿ ಮಾಡಬೇಕಾದ ಅನಿವಾರ್ಯತೆ ಇದೆ.

ಪ್ರತಿವರ್ಷ ಸಹಕಾರ ವಲಯದ ಪ್ರಗತಿಯ ಪ್ರಮಾಣ ಬೆಳೆಯುತ್ತಲೇ ಸಾಗಿದೆ. ಯುವಜನ, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಸ್ವಯಂಪ್ರೇರಣೆಯಿಂದ ತೊಡಗಿಸಿಕೊಳ್ಳುವುದು ಅತ್ಯಗತ್ಯ. ಈ ನಿಟ್ಟಿನಲ್ಲಿ ಸಹಕಾರ ಶಿಕ್ಷಣ–ಪ್ರಚಾರ ಕಾರ್ಯಗಳಿಗೆ ನಾವು ಒತ್ತು ನೀಡಬೇಕಾಗಿದೆ.

ಇದರಿಂದ ಗ್ರಾಹಕ ಚಟುವಟಿಕೆಗಳ ಜೊತೆಗೆ ಉದ್ಯೋಗ ಸೃಷ್ಠಿಗೆ ಅವಕಾಶ ಕಲ್ಪಿಸಿಕೊಟ್ಟು ಸಹಕಾರ ಕ್ಷೇತ್ರದಲ್ಲಿ ವೃತ್ತಿಪರತೆಗೆ ಹೆಚ್ಚು ಆದ್ಯತೆ ನೀಡಬೇಕಾಗಿದೆ. ಸಹಕಾರ ಸಂಸ್ಥೆಗಳು ತಂತ್ರಜ್ಞಾನವನ್ನು ಅಳವಡಿಸಿಕೊಂಡರೆ ತ್ವರಿತ ಸೇವೆಗಳು ಲಭ್ಯವಾಗಿ ಜನರಲ್ಲಿ ನಂಬಿಕೆ ವಿಶ್ವಾಸವನ್ನು ವೃದ್ಧಿಸುತ್ತವೆ. ಸಹಕಾರಿಗಳು, ಆಡಳಿತಮಂಡಳಿ ಸದಸ್ಯರು ಬದ್ಧತೆಯೊಂದಿಗೆ ಈ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಬೇಕಾದ ಅನಿವಾರ್ಯತೆಯ ಜೊತೆಗೆ ಉತ್ತಮ ಮಾರ್ಗದರ್ಶನ ನೀಡುವುದು ಸೂಕ್ತ.

ಈ ಬಾರಿಯ ಸಹಕಾರ ಸಪ್ತಾಹದ ಧ್ಯೇಯ "ಭಾರತ @75–ಸಹಕಾರ ಸಂಸ್ಥೆಗಳ ಬೆಳವಣಿಗೆ ಮತ್ತು ಮುಂದಿನ ಭವಿಷ್ಯ" ಎಂಬುದಾಗಿದೆ. ಸಹಕಾರಿ ಬಂಧುಗಳು ರಾಷ್ಟ್ರ–ರಾಜ್ಯ ಜಿಲ್ಲಾ ಗ್ರಾಮೀಣ ಮಟ್ಟದಲ್ಲಿ ಏರ್ಪಾಡಾಗುವ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಸಂಘಗಳ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಲು ಕೋರುತ್ತೇನೆ.

ಈ ವರ್ಷ ಎಲ್ಲಾ ಸಹಕಾರಿಗಳ ಪಾಲಿನ ಸಂಜೀವಿನಿಯಾಗಿರುವ "ಯಶಸ್ವಿನಿ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯನ್ನು" ಸರ್ಕಾರ–ಸಹಕಾರ ಇಲಾಖೆ ಮರು ಜಾರಿಗೆ ತಂದಿದೆ. ಮುಂಬರುವ ದಿನಗಳಲ್ಲಿ ಸಹಕಾರ ಇಲಾಖೆ ಅಡಿಯಲ್ಲಿ ವಿಭಿನ್ನ ಜನಪರ ಯೋಜನೆಗಳು ಮತ್ತಷ್ಟು ಜಾರಿಯಾಗಲಿ ಎಂಬುದು ನಮ್ಮೆಲ್ಲರ ಆಶಯ. ಮುಖ್ಯಮಂತ್ರಿಗಳು, ಸಹಕಾರ ಸಚಿವರು, ಆರೋಗ್ಯ ಸಚಿವರು ಸೇರಿದಂತೆ ಜನಪ್ರತಿನಿಧಿಗಳು, ಅಧಿಕಾರಿಗಳಿಗೆ ಅಭಿನಂದಿಸುತ್ತಾ ಈ ಬಾರಿಯ ಸಹಕಾರ ಸಪ್ತಾಹ ಅರ್ಥಪೂರ್ಣವಾಗಿ ಯಶಸ್ವಿಯಾಗಲಿ ಎಂದು ಹಾರೈಸುತ್ತಾ ಶುಭ ಕೋರುತ್ತೇನೆ.

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

ಸಹಕಾರ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

**ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು**

ನಂ. 16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್‌ರಸ್ತೆ,
ಮಲ್ಲೇಶ್ವರಂ, ಬೆಂಗಳೂರು – 560003
ದೂರವಾಣಿ ಸಂಖ್ಯೆ :
080–23564444 / 23464033 / 23464034
ಇ–ಮೇಲ್ : info@ksccsf.org
ksccsfltd@gmail.com, ವೆಬ್ : www.ksccsf.org

**ಸಂಪಾದಕ ಮಂಡಳಿ**

ಅಧ್ಯಕ್ಷರು / ಪ್ರಧಾನ ಸಂಪಾದಕರು :
**ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ**

ಉಪಸಂಪಾದಕರು :
**ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್ ಗೌಡ**

ಸದಸ್ಯರು :
**ಶ್ರೀ ಕೆ. ಕೃಷ್ಣಮೂರ್ತಿ, ಶ್ರೀ ಜಿ. ಮಲ್ಲಿಕಾರ್ಜುನಯ್ಯ**
**ಶ್ರೀ ಹೆಚ್.ಟಿ. ನಾಗೇಶ್, ಶ್ರೀ ಚಿತ್ತರಂಜನ್ ಬೋಳಾರ್**

ಸಂಪಾದಕರು :
**ಶ್ರೀಮತಿ ಪಿ. ಆಶಾಲತಾ**
ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರಭಾರ)

## ಆತ್ಮಶಕ್ತಿ ವಿವಿಧೋದ್ದೇಶ ಸಹಕಾರಿ ಸಂಘದ 24ನೇ ನೂತನ ಗಂಜಿಮಠ ಶಾಖೆಯ ಉದ್ಘಾಟನೆ

ಆತ್ಮಶಕ್ತಿ ವಿವಿದೋದ್ದೇಶ ಸಹಕಾರಿ ಸಂಘದ 24ನೇ ಗಂಜಿಮಠ ಶಾಖೆಯು ಗ್ರಾಮ ಪಂಚಾಯತ್ ಕಟ್ಟಡದ ಮೊದಲ ಮಹಡಿಯಲ್ಲಿ ಬುಧವಾರ ನೆರವೇರಿತು.

ಮಂಗಳೂರು ನಗರ ಉತ್ತರ ಕ್ಷೇತ್ರದ ಶಾಸಕ ಡಾ। ಭರತ್ ಶೆಟ್ಟಿ ವೈ ಉದ್ಘಾಟನೆ ನೆರವೇರಿಸಿದರು. ಸಹಕಾರ ರತ್ನ ಶ್ರೀ ಚಿತ್ತರಂಜನ್ ಬೋಳಾರ್ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಗಂಜಿಮಠ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀ ನೋಣಯ್ಯ ಕೋಟ್ಯಾನ್ ಅವರು ಭದ್ರತಾ ಕೋಶವನ್ನು ಉದ್ಘಾಟಿಸಿದರು.ಉದ್ಯಮಿ ಚಂದ್ರಹಾಸ ಶೆಟ್ಟಿ ನಾರಳ ಗಣಕೀಕೃತ ಬ್ಯಾಂಕಿಂಗ್‌ಗೆ ಚಾಲನೆ ನೀಡಿದರು.

ಬಗರ ಹುಕಂ ಅಕ್ರಮ ಸಕ್ರಮ ಸಮಿತಿ ಸದಸ್ಯರಾದ ಶೋಹನ್ ಅತಿಕಾರಿ ಅವರು ನಿರಖು ಠೇವಣಿ ಪತ್ರ ಬಿಡುಗಡೆ ಮಾಡಿದರ್.

ಬಿಲ್ಲವ ಸಮಾಜ ಸೇವಾ ಸಂಘ ಪೆರಾರ ಗಂಜಿಮಠ ಗೌರವಾಧ್ಯಕ್ಷ ಶ್ರೀ ಕೃಷ್ಣ ಅಮೀನ್ ರವರು ಉಳಿತಾಯ ಖಾತೆಗೆ ಚಾಲನೆ ನೀಡಿದರು. ನೋಟರಿ ವಕೀಲರಾದ ಶ್ರೀಮತಿ ಪುನೀತರವರು ಇ–ಮುದ್ರಾಂಕ ಸೇವೆಗೆ ಚಾಲನೆ ನೀಡಿದರು. ರಿಕ್ಷ ಚಾಲಕ ಮತ್ತು ಮಾಲೀಕರ ಸಂಘ ಗಂಜಿಮಠ ಇದರ ಅಧ್ಯಕ್ಷರಾದ ಶ್ರೀ ಜನಾರ್ಧನ ಓಡ್ದೂರುರವರು ಮೈಕ್ರೋ ಸಾಲ ಯೋಜನೆಗೆ ಚಾಲನೆ ನೀಡಿದರು.

ಗಂಜಿಮಠ ಗ್ರಾಮ ಪಂಚಾಯತ್ ಸದಸ್ಯರಾದ ಶ್ರೀ ಸುನಿಲ್



ಮನೋಜ್ ಫೆರ್ನಾಂಡಿಸ್ ರವರು ಆವರ್ತನ ಠೇವಣಿ ಪತ್ರ ಬಿಡುಗಡೆ ಮಾಡಿದರು. ಗಂಜಿಮಠ ಗ್ರಾಮ ಪಂಚಾಯತ್ ಉಪಾಧ್ಯಕ್ಷೆ ಕುಮುದಾ ನಾಯ್ಕ್, ಸದಸ್ಯರಾದ ಮಹಮ್ಮದ್ ಜಹೂರ್, ಮೊಹಮ್ಮದ್ ಸಾದಿಕ್, ರೋಹಿತಾಕ್ಷೀ ತಾಲೂಕು ಪಂಚಾಯತ್ ಮಾಜಿ ಸದಸ್ಯ ಶ್ರೀ ಜಿ.ಸುನಿಲ್ ಸಂಘದ ನಿರ್ದೇಶಕರಗಳಾದ ಶ್ರೀ ಜಿ.ಪರಮೇಶ್ವರ ಪೂಜಾರಿ, ಶ್ರೀ ಆನಂದ ಎಸ್ ಕೊಂಡಾಣ, ಶ್ರೀ ಸೀತಾರಾಮ ಎನ್, ಶ್ರೀ ರಮಾನಾಥ ಸನಿಲ್, ಶ್ರೀ ಚಂದ್ರಹಾಸ ಮರೋಳಿ, ಶ್ರೀ ಮುದ್ದು ಮೂಡುಬೆಳ್ಳೆ, ಶ್ರೀ ಗೋಪಾಲ ಎಂ, ಶ್ರೀಮತಿ ಉಮಾವತಿ, ಶಾಖಾಧಿಕಾರಿ ಸುಜಾತ ಮತ್ತಿತ್ತರರು ಉಪಸ್ಥಿತರಿದ್ದರು.

ಶಾಖೆ ತೆರೆಯುವಲ್ಲಿ ವಿಶೇಷ ಸಹಕಾರ ನೀಡಿದ ವಕೀಲರಾದ ಅಕ್ಷಯ್ ಕೋಟ್ಯಾನ್, ಶೋಹನ್ ಅತಿಕಾರಿ ಹಾಗೂ ಜಯಂತ್ ಅವರಿಗೆ ಸಂಘದ ವತಿಯಿಂದ ಗೌರವಾರ್ಪಣೆ ಸಲ್ಲಿಸಲಾಯಿತು.

**ಸುಭಾಷಿತ :** ನೀವು ಎಲ್ಲರನ್ನೂ ಮೆಚ್ಚಿಸಲು ಪ್ರಯತ್ನಿಸಿದರೆ, ನೀವು ಯಾರನ್ನು ಮೆಚ್ಚಿಸುವುದಿಲ್ಲ, ಇತರರ ಸಂತೋಷಕ್ಕಾಗಿ ನಿಮ್ಮ ಜೀವನವನ್ನು ನಡೆಸುವುದು ಅಸಾಧ್ಯ. – ಸುಧಾಮೂರ್ತಿ

ಸಹಕಾರ ವಾರ್ತಾ ಪತ್ರಿಕೆ ಚಂದಾದಾರರಾಗ ಬಯಸುವವರು ಚಂದಾ ಹಣವನ್ನು "ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು" ಇವರ ಹೆಸರಿಗೆ ಚೆಕ್ ಅಥವಾ ಡಿಡಿಯನ್ನು ಬರೆದು ಕಳುಹಿಸಬೇಕಾಗಿ ವಿನಂತಿ. - ಸಿ.ಇ.ಒ.
ಐದು ವರ್ಷಗಳ ಚಂದಾ: ರೂ : 1500/-

**ಸೂಚನೆ :**
ಈ ಪತ್ರಿಕೆಯಲ್ಲಿ ಪ್ರಕಟವಾಗುವ ಲೇಖನಗಳಲ್ಲಿನ ಅನಿಸಿಕೆ, ಅಭಿಪ್ರಾಯಗಳು ಆಯಾ ಬರಹಗಾರರದೇ ಆಗಿರುತ್ತದೆ ವಿನಃ ಪತ್ರಿಕೆ / ಮಹಾಮಂಡಳದ ವಿಚಾರಗಳಾಗಿರುವುದಿಲ್ಲ.
- ಸಂಪಾದಕರು,
ಸಹಕಾರ ವಾರ್ತಾ ಪತ್ರಿಕೆ.

## 69ನೇ ಅಖಿಲ ಭಾರತ ಸಹಕಾರ ಸಪ್ತಾಹ ಪೂರ್ವಭಾವಿ ಸಭೆ

# ಪರಿಣಾಮಕಾರಿ ಆಚರಣೆಗೆ ಸಚಿವ ಎಸ್.ಟಿ. ಸೋಮಶೇಖರ್ ಕರೆ
# ಸಹಕಾರ ಚಳವಳಿಯ ಸಾಧನೆ, ವೈಫಲ್ಯಗಳ ಪರಾಮರ್ಶೆಗೆ ಸಪ್ತಾಹ ಅತ್ಯುತ್ತಮ ವೇದಿಕೆ : ಜಿ.ಟಿ. ದೇವೇಗೌಡ




**ಬೆಂಗಳೂರು** : 2022ರ ನವೆಂಬರ್ 14 ರಿಂದ 20 ರವರೆಗೆ ಏಳು ದಿನಗಳ ಕಾಲ 69ನೇ ಅಖಿಲ ಭಾರತ ಸಹಕಾರ ಸಪ್ತಾಹವನ್ನು ರಾಜ್ಯದಾದ್ಯಂತ ಪರಿಣಾಮಕಾರಿಯಾಗಿ ಆಚರಿಸಲು ಸಹಕಾರ ಸಚಿವ ಎಸ್.ಟಿ. ಸೋಮಶೇಖರ್‌ರವರು ಕರೆ ನೀಡಿದರು.

ವಿಧಾನಸೌಧದ ಮೂರನೇ ಮಹಡಿಯ ಸಭಾಂಗಣ ಕೊಠಡಿಯಲ್ಲಿ ಹಮ್ಮಿಕೊಳ್ಳಲಾಗಿದ್ದ 'ಸಹಕಾರ ಸಪ್ತಾಹದ ಪೂರ್ವಭಾವಿ ಸಿದ್ಧತಾ ಸಭೆ' ಬಳಿಕ ಮಾಧ್ಯಮದವರೊಂದಿಗೆ ಸಚಿವರು ಮಾತನಾಡಿದ ಅವರು, ನವೆಂಬರ್ 14ರಂದು ಕಲಬುರಗಿಯಲ್ಲಿ ಸಹಕಾರ ಸಪ್ತಾಹದ ಉದ್ಘಾಟನೆ ಕಾರ್ಯಕ್ರಮ ಮಾಡಲು ತೀರ್ಮಾನಿಸಲಾಗಿದೆ. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ನವೆಂಬರ್ 20ರಂದು ಮೈಸೂರಿನಲ್ಲಿ ಸಮಾರೋಪ ಸಮಾರಂಭ ನಡೆಸಲು ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ಸಹಕಾರ ಸಪ್ತಾಹವು ಈ ವರ್ಷ ಬಹಳ ವಿಜೃಂಭಣೆಯಿಂದ, ಅರ್ಥಪೂರ್ಣವಾಗಿ, ಪರಿಣಾಮಕಾರಿಯಾಗಿ ನೆರವೇರಲಿದೆ ಎಂಬ ಆಶಾಭಾವನೆ ವ್ಯಕ್ತಪಡಿಸಿದ ಅವರು ಸಪ್ತಾಹದ ಯಶಸ್ಸಿಗೆ ಎಲ್ಲರೂ ಕಾರ್ಯಪ್ರವೃತ್ತರಾಗಬೇಕು. ಆಯಾ ಜಿಲ್ಲೆಗಳ ಕಾರ್ಯಕ್ರಮ ಯಶಸ್ವಿಗೆ ಸ್ಥಳೀಯ ಜನಪ್ರತಿನಿಧಿಗಳು, ಸಹಕಾರಿಗಳನ್ನು ಆಹ್ವಾನಿಸಬೇಕು ಎಂದು ಹೇಳಿದರು.

ಸಹಕಾರ ಚಳವಳಿಯ ಬೆಳವಣಿಗೆಗೆ ಶ್ರಮಿಸುತ್ತಿರುವ ಸಹಕಾರಿಗಳನ್ನು ಗುರುತಿಸಿ ಸಹಕಾರ ರತ್ನ ಪ್ರಶಸ್ತಿಯನ್ನು ಈ ಬಾರಿ ರಾಜ್ಯಮಟ್ಟದ ಸಹಕಾರ ಸಪ್ತಾಹ ಕಾರ್ಯಕ್ರಮಗಳು ನಡೆಯುವ ವೇದಿಕೆಯಲ್ಲಿ ಪ್ರದಾನ ಮಾಡಲಾಗುವುದು ಎಂದರು.

ಸಹಕಾರ ಕ್ಷೇತ್ರದ ಸಮಗ್ರ ಬೆಳವಣಿಗೆಗೆ ಸರ್ಕಾರ ಸಂಪೂರ್ಣ ಪ್ರೋತ್ಸಾಹ ನೀಡುತ್ತಾ ಬಂದಿದೆ. ಸರ್ಕಾರದ ಯೋಜನೆಗಳು ಪ್ರತಿಯೊಬ್ಬರಿಗೂ ತಲುಪುವಂತಾಗಬೇಕು. ಈ ಕಾರಣದಿಂದ ಕಾರ್ಯಕ್ರಮ ಆಯೋಜಕರು ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯಕ್ರಮ ಏರ್ಪಾಡು ಮಾಡುವಂತೆ ತಿಳಿಸಿದರು. ರಾಜ್ಯದ ಎಲ್ಲಾ ಸಹಕಾರಿ ಬಂಧುಗಳು ಸಪ್ತಾಹ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಚಿಂತನ ಮಂತನ ನಡೆಸಿ ಸಹಕಾರಾಭಿವೃದ್ಧಿ ಬೆಳವಣಿಗೆಗೆ ನೆರವಾಗಬೇಕು ಎಂದರು.

### 'ಹಾಲಿನ ದರ ಹೆಚ್ಚಳ : ಮುಖ್ಯಮಂತ್ರಿ ತೀರ್ಮಾನಕ್ಕೆ'

ಹಾಲಿನ ದರ ಹೆಚ್ಚಳದ ಲಾಭಾಂಶದ ಹಣವನ್ನು ರೈತರಿಗೆ ನೀಡಬೇಕೆಂಬ ಒಲವನ್ನು ಮುಖ್ಯಮಂತ್ರಿಗಳು ಹೊಂದಿದ್ದಾರೆ. ಆದರೆ, ದರ ಹೆಚ್ಚಳ ಮಾಡದಂತೆ ಗ್ರಾಹಕರು ಒತ್ತಡ ಹಾಕುತ್ತಿದ್ದಾರೆ. ದರ ಹೆಚ್ಚಳದ ಸಂಬಂಧ ಮುಖ್ಯಮಂತ್ರಿಗಳ ಗಮನದಲ್ಲಿದ್ದು, ಸೂಕ್ತ ಸಮಯದಲ್ಲಿ ಸೂಕ್ತ ನಿರ್ಧಾರ ಕೈಗೊಳ್ಳಲಿದ್ದಾರೆ. ದರ ಹೆಚ್ಚಳದ ಬಗ್ಗೆ 15 ಹಾಲು ಒಕ್ಕೂಟಗಳಿಂದ ಮಾಹಿತಿ ನೀಡಲಾಗಿದ್ದು ಸಂಬಂಧಪಟ್ಟವರೊಂದಿಗೆ ಚರ್ಚಿಸಿ ಮುಖ್ಯಮಂತ್ರಿಗಳು ಅಂತಿಮ ತೀರ್ಮಾನ ಕೈಗೊಳ್ಳಲಿದ್ದಾರೆ ಸಚಿವರು ತಿಳಿಸಿದರು.

**ನಂದಿನಿ ಕ್ಷೀರಸಮೃದ್ಧಿ ಬ್ಯಾಂಕ್** : ನಂದಿನಿ ಕ್ಷೀರಸಮೃದ್ಧಿ ಬ್ಯಾಂಕ್ ಸ್ಥಾಪನೆ ಕುರಿತು ಕೇಂದ್ರ ಸಚಿವರಾದ ನಿರ್ಮಲಾ ಸೀತರಾಮನ್ ಅವರ ಜೊತೆ ಮುಖ್ಯಮಂತ್ರಿಗಳು ಚರ್ಚೆ ನಡೆಸಿದ್ದಾರೆ. ಆರ್‌ಬಿಐಗೆ ಸಂಬಂಧಪಟ್ಟ ದಾಖಲೆಗಳನ್ನು ಸಲ್ಲಿಕೆ ಮಾಡಲಾಗಿದೆ. ಆರ್‌ಬಿಐ ಅನುಮತಿಗೆ ಕೆಲವು ತಿದ್ದುಪಡಿ ಅವಶ್ಯಕವಾಗಿದ್ದು ತಿದ್ದುಪಡಿ ಆದ ಬಳಿಕ ಜಾರಿಯಾಗಲಿದೆ. ಯಶಸ್ವಿನಿ ಜಾರಿಗೆ ಎಲ್ಲಾ ಕಾರ್ಯ ಮುಕ್ತಾಯವಾಗಿದ್ದು ನವೆಂಬರ್ 1 ರಿಂದ ಚಾಲನೆ ಸಿಗಲಿದೆ ಎಂದು ಹೇಳಿದರು.

# ಸಹಕಾರಿ ಹಬ್ಬದಂತೆ ಆಚರಿಸಲು ಜಿ.ಟಿ. ದೇವೇಗೌಡರ ಕರೆ



ಶಾಸಕರು ಹಾಗೂ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ. ದೇವೇಗೌಡ ಅವರು ಮಾತನಾಡಿ, ಸಹಕಾರ ಸಪ್ತಾಹ ಸಹಕಾರಿಗಳ ಪಾಲಿಗೆ ಒಂದು ಹಬ್ಬವಿದ್ದಂತೆ. ರಾಜ್ಯದ ಪ್ರತಿಯೊಬ್ಬ ಸಹಕಾರಿಯು ಈ ಸಪ್ತಾಹದಲ್ಲಿ ಪಾಲ್ಗೊಂಡು ಸಹಕಾರ ಚಳುವಳಿಯ ಸಾಧನೆ ಹಾಗೂ ವೈಫಲ್ಯಗಳ ಪರಾಮರ್ಶೆ ನಡೆಸುವ ಮೂಲಕ ಬಲಿಷ್ಠವಾದ ಸಹಕಾರ ಕ್ಷೇತ್ರವನ್ನು ಕಟ್ಟೋಣವೆಂದು ಕರೆ ನೀಡಿದರು.

ರಾಜ್ಯದ ಎಲ್ಲಾ ರೀತಿಯ ಸಹಕಾರ ಸಂಘಗಳಲ್ಲಿ ಸಹಕಾರ ಧ್ವಜಾರೋಹಣ, ವಿವಿಧ ಕಾರ್ಯಕ್ರಮಗಳ ಮೂಲಕ ಸಹಕಾರ ಸಪ್ತಾಹವನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ಈ ನಿಟ್ಟಿನಲ್ಲಿ ಆಯಾಯ ಜಿಲ್ಲೆಗಳ ಸಹಕಾರಿ ಮುಖಂಡರುಗಳು, ಸಹಕಾರ ಇಲಾಖಾಧಿಕಾರಿಗಳು, ಜಿಲ್ಲಾ ಸಹಕಾರ ಯೂನಿಯನ್ನಿನ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮಗಳನ್ನು ಏರ್ಪಡಿಸಬೇಕು ಎಂದರು. ಶಾಸಕರು ಹಾಗೂ ವಿಜಯಪುರ ಜಿಲ್ಲಾ ಕೇಂದ್ರ ಬ್ಯಾಂಕಿನ ಅಧ್ಯಕ್ಷರಾದ ಶಿವಾನಂದ ಪಾಟೀಲ್ ರವರು ಮಾತನಾಡಿ, ಸಹಕಾರ ಕ್ಷೇತ್ರದಲ್ಲಿ ನಷ್ಟಕ್ಕೆ ಒಳಗಾಗಿರುವ ಸಹಕಾರ ಸಂಘಗಳ ಕುರಿತು ಹೆಚ್ಚಿನ ಗಮನ ಹರಿಸಿ, ಅವುಗಳ ಬಲವರ್ಧನೆಗೆ ಸಹಕಾರ ಸಚಿವರು ಹಾಗೂ ಮಹಾಮಂಡಳದ ಅಧ್ಯಕ್ಷರು ಕ್ರಮಕೈಗೊಳ್ಳಬೇಕು ಎಂದು ಸಲಹೆ ಮಾಡಿದರು.

ಪೂರ್ವಭಾವಿ ಸಭೆಯಲ್ಲಿ ಸಹಕಾರ ಮಾರಾಟ ಮಹಾಮಂಡಳ ಅಧ್ಯಕ್ಷರಾದ ಡಾ. ಎಂ.ಎನ್. ರಾಜೇಂದ್ರಕುಮಾರ್, ಗ್ರಾಹಕರ ಮಹಾಮಂಡಳದ ಅಧ್ಯಕ್ಷರಾದ ಜಿ.ಪಿ. ಪಾಟೀಲ್, ಕೆ.ಹೆಚ್.ಎಫ್. ಅಧ್ಯಕ್ಷರಾದ ಬಿ.ಡಿ. ಭೂಕಾಂತ್, ಮಹಿಳಾ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಶಕುಂತಲಾ ಕೆ. ಬೆಲ್ದಾಳೆ, ವಿವಿಧ ರಾಜ್ಯ ಸಹಕಾರ ಮಹಾಮಂಡಳಗಳ ಅಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕರುಗಳು, ಸಹಕಾರ ಮಹಾಮಂಡಳದ ಉಪಾಧ್ಯಕ್ಷರಾದ ಜಗದೀಶ ಕವಟಗಿಮಠ, ಪತ್ತಿನ ಮಹಾಮಂಡಳದ ಉಪಾಧ್ಯಕ್ಷರಾದ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ, ನಿರ್ದೇಶಕರುಗಳಾದ ಧರೇಪ್ಪ ಮಹದೇವ ಆಲಗೂರ, ಡಾ. ಸಂಜಯ ಪಿ. ಹೊಸಮಠ, ಹೆಚ್.ಟಿ. ನಾಗೇಶ್, ಡಿ. ಚನ್ನಯ್ಯ, ಪ್ರಭಾರ ಸಿಇಓ ಆಶಾಲತಾ, ಸಹಕಾರ ಇಲಾಖೆಯ ಪ್ರಧಾನ ಕಾರ್ಯದರ್ಶಿ ಎಸ್.ಆರ್. ಉಮಾಶಂಕರ್, ಸಹಕಾರ ಸಂಘಗಳ ನಿಬಂಧಕರಾದ ಕ್ಯಾಪ್ಟನ್ ಕೆ. ರಾಜೇಂದ್ರ, ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಎಸ್. ಅರಳಿ ಸೂರ್ಯಕಾಂತ್, ಕಾರ್ಯದರ್ಶಿ ಲಕ್ಷ್ಮೀಪತಯ್ಯ, ಅಪರ ನಿಬಂಧಕರು, ಜಂಟಿ ನಿಬಂಧಕರು ಸೇರಿದಂತೆ ಸಹಕಾರ ಇಲಾಖಾ ಅಧಿಕಾರಿಗಳು ಮತ್ತು ಸಹಕಾರಿ ಮುಖಂಡರುಗಳು ಉಪಸ್ಥಿತರಿದ್ದರು.



# 69ನೇ ಅಖಿಲ ಭಾರತ ಸಹಕಾರ ಸಪ್ತಾಹ : 75ರ ಸಂಭ್ರಮದಲ್ಲಿ ಭಾರತ

# ಸಹಕಾರ ಸಂಸ್ಥೆಗಳ ಬೆಳವಣಿಗೆ ಮತ್ತು ಮುಂದಿನ ಭವಿಷ್ಯ

ರಾಷ್ಟ್ರೀಯ ಸಹಕಾರ ಯೂನಿಯನ್ ವತಿಯಿಂದ ನವೆಂಬರ್ 14 ರಿಂದ 20ರ ವರೆಗೆ 69ನೇ ಅಖಿಲ ಭಾರತ ಸಹಕಾರಿ ಸಪ್ತಾಹವನ್ನು ಆಚರಿಸಲಾಗುತ್ತಿದೆ. ಸಹಕಾರ ಸಪ್ತಾಹದ ಆಚರಣೆಯ ಉದ್ದೇಶವು ಸಹಕಾರಿಗಳೆಲ್ಲರೂ ಒಂದೇಡೆ ಸೇರಿ ಸಹಕಾರ ಚಳವಳಿಯ ಸಾಧನೆ, ಸಹಕಾರ ಸಂಸ್ಥೆಗಳ ಯಶೋಗಾಥೆಗಳು ಹಾಗು ಭವಿಷ್ಯದ ಕ್ರಿಯಾ ಯೋಜನೆಯನ್ನು ರೂಪಿಸಿ ಅವುಗಳನ್ನು ಕುರಿತು ಚಿಂತನ–ಮಂಥನ ನಡೆಸುವುದಾಗಿದೆ. ಇದೊಂದು ಸಹಕಾರಿ ಚಳವಳಿಯ ಬೆಳವಣಿಗೆಗೆ ಪೂರಕವಾದಂತಹ ವಾತವರಣವನ್ನು ನಿರ್ಮಿಸುತ್ತದೆ ಎನ್ನಬಹುದಾಗಿದೆ.

ಕಳೆದ 68 ವರ್ಷಗಳಿಂದ ಸಹಕಾರ ಸಪ್ತಾಹ ಆಚರಣೆಯಾಗುತ್ತಿದೆ. ಈ ಸಂದರ್ಭದಲ್ಲಿ ಚಳವಳಿಯ ಬೆಳವಣಿಗೆಗೆ ಅಗತ್ಯವಿರುವ ಕಾರ್ಯಾಗಾರಗಳು/ವಿಚಾರ ಸಂಕಿರಣಗಳು/ಸ್ಪರ್ಧೆಗಳು ಮತ್ತು ಇತರ ಕಾರ್ಯಕ್ರಮಗಳನ್ನು ಎಲ್ಲಾ ಸಹಕಾರಿ ಸಂಸ್ಥೆಗಳು ಒಟ್ಟುಗೂಡಿ ಸಪ್ತಾಹವನ್ನು ಹಬ್ಬದಂತೆ ಆಚರಿಸುತ್ತಾರೆ. ಈ ಆಚರಣೆಯ ಮೂಲಕ ಸಾರ್ವಜನಿಕರಲ್ಲಿ ಸಹಕಾರದ ಕುರಿತು ಅರಿವು ಮೂಡಿಸಿ, ಅವರನ್ನು ಸಹಕಾರಿ ಕಕ್ಷೆಯೊಳಗೆ ಕರೆತರಲಾಗುವ ಪ್ರಯತ್ನವನ್ನು ಮಾಡಲಾಗುತ್ತದೆ.

ಸ್ಪರ್ಧಾತ್ಮಕ ಆರ್ಥಿಕ ಸನ್ನಿವೇಶದಲ್ಲಿ ಸಹಕಾರಿ ಸಂಸ್ಥೆಗಳು ಹಲವಾರು ರೀತಿಯಾದ ಸವಾಲುಗಳನ್ನು ಎದುರಿಸುತ್ತಿವೆ. ಸಪ್ತಾಹದ ಸಂದರ್ಭದಲ್ಲಿ ಈ ಸವಾಲುಗಳನ್ನು ಕುರಿತು ಚರ್ಚಿಸಿ, ಅವುಗಳಿಗೊಂದು ಪರಿಹಾರ ಮಾರ್ಗ ಕಂಡುಕೊಳ್ಳುವ ಪ್ರಯತ್ನವನ್ನು ಸಹಕಾರಿಗಳು ಮಾಡಬೇಕಾಗಿದೆ.

ಈ ವರ್ಷದ ಸಹಕಾರಿ ಸಪ್ತಾಹದ ಧ್ಯೇಹ "ಭಾರತ@75 : ಸಹಕಾರ ಸಪ್ತಾಹದ ಬೆಳವಣಿಗೆ ಮತ್ತು ಭವಿಷ್ಯ ಎಂಬುದಾಗಿದ್ದು ಭಾರತದಲ್ಲಿ ಸುಮಾರು 8.5 ಲಕ್ಷಕ್ಕೂ ಹೆಚ್ಚು ಸಹಕಾರ ಸಂಸ್ಥೆಗಳು ಸುಮಾರು 30 ಕೋಟಿ ಸದಸ್ಯತ್ವದೊಂದಿಗೆ ಕಾರ್ಯನಿರ್ವಹಿಸುತ್ತಿದ್ದು ಅವುಗಳು ಭಾರತದ ಆರ್ಥಿಕತೆಗೆ ತಮ್ಮದೆಯಾದ ಕೊಡುಗೆ ನೀಡುತ್ತಿವೆ. ಭಾರತದ ಸಹಕಾರ ಚಳವಳಿ ಉತ್ತಮವಾಗಿ ಬೆಳವಣಿಗೆ ಹೊಂದುತ್ತಿದ್ದು, ಅಂತರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿರುವ ಸಹಕಾರ ಸಂಸ್ಥೆಗಳು ಭಾರತದಲ್ಲಿವೆ. ವಿವಿಧ ರೀತಿಯಾದಂತಹ ಸಹಕಾರ ಸಂಸ್ಥೆಗಳ ಯಶೋಗಾಥೆಗಳನ್ನು ನಾವು ನೊಡಬಹುದಾಗಿದೆ. ಕೋವಿಡ್ ಬಿಕ್ಕಟ್ಟಿನ ಸಮಯದಲ್ಲಿಯೂ ಸಹಕಾರ ಸಂಸ್ಥೆಗಳು ಅವುಗಳ ಸಾಮಾಜಿಕ ಕಳಕಳಿಯ ತತ್ವದ ಮೇಲೆ ಜನಸಾಮಾನ್ಯರಿಗೆ ನೆರವಾಗುವ ಮೂಲಕ ಜನಮನ್ನಣೆ ಗಳಿಸಿವೆ.

ಅಮೂಲ್, ಕೆಎಂ.ಎಫ್ ಸೇರಿದಂತೆ ವಿವಿಧ ರಾಜ್ಯಗಳ ಸಹಕಾರ ಹಾಲು ಒಕ್ಕೂಟಗಳು ಕೋವಿಡ್ ಬಿಕ್ಕಟನಲ್ಲಿಯೂ ಹಾಲು ಪೂರೈಕೆಯಲ್ಲಿ ಯಶಸ್ವಿಯಾದವು. ಹಾಗೆಯೇ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ರೈತರಿಗೆ ನೆರವಾದವು, ವಿವಿಧ ರೀತಿಯ ಸಹಕಾರ ಸಂಸ್ಥೆಗಳು ಸಹ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವಲ್ಲಿ ಯಶಸ್ವಿಯಾದವು. ಹೀಗೆ ಸಮಾಜದ ಸ್ಥಿತಿಸ್ಥಾಪಕತ್ವ ಮತ್ತು ಸವಾಲುಗಳ ನಡುವೆಯೂ ಸಹಕಾರ ಸಂಸ್ಥೆಗಳು ತೋರಿಸಿದ ಸಾಮಾಜಿಕ ಕಳಕಳಿ ಪ್ರಶಂಸನೀಯವಾದವು.

ಕೇಂದ್ರ ಸರ್ಕಾರದ ಆಶಯದಂತೆ ನೂತನ ಸಹಕಾರ ಸಚಿವಾಲಯ ಮತ್ತು ರಾಷ್ಟ್ರೀಯ ಸಹಕಾರ ಯೂನಿಯನ್ ನೇತೃತ್ವದಲ್ಲಿ ಈ ವರ್ಷ 'ಭಾರತ@75: ಸಹಕಾರಿ ಸಂಸ್ಥೆಗಳು ಮತ್ತು ಮುಂದಿನ ಭವಿಷ್ಯ' ಎಂಬ ಧ್ಯೇಯದೊಂದಿಗೆ 69ನೇ ಅಖಿಲ ಭಾರತ ಸಹಕಾರ ಸಪ್ತಾಹವನ್ನು ಆಚರಿಸುತ್ತಿದೆ. ಇದರ ಉದ್ದೇಶ ಸಹಕಾರ ಚಳುವಳಿಯ ಸಾಧನೆಗಳನ್ನು ನೆನಪಿಸಿ, ಸಹಕಾರ ಚಳವಳಿಯ ಮುಂದಿರುವ ಸವಾಲುಗಳಿಗೆ ಪರಿಹಾರ ಮಾರ್ಗ ಕಂಡುಕೊಳ್ಳುವುದಾಗಿದೆ.

ಮೇಲಿನ ಹಿನ್ನೆಲೆಯಲ್ಲಿ, ಸಹಕಾರ ಸಚಿವಾಲಯವು ಈಗಾಗಲೇ ಸಹಕಾರ ಚಳವಳಿಯ ಬೆಳವಣಿಗೆಗೆ ಪೂರಕವಾಗಿ ಸಹಕಾರ ವಿಶ್ವವಿದ್ಯಾಲಯ ಸ್ಥಾಪನೆ ಮಾಡಿ ಸಹಕಾರ ಶಿಕ್ಷಣಕ್ಕೆ ಒತ್ತು ನೀಡುವ ಮೂಲಕ ವೃತ್ತಿಪರ ಕಾರ್ಯನಿರ್ವಹಣೆಗೆ ಆದ್ಯತೆ ನೀಡುವ ಗುರಿ ಹೊಂದಿದೆ.' ಉದ್ಯಮಶೀಲತೆ ಅಭಿವೃದ್ಧಿಗಾಗಿ ಸಾರ್ವಜನಿಕ–ಖಾಸಗಿ ಸಹಕಾರವನ್ನು ಬಲಪಡಿಸುವುದು, ಪಾಲುದಾರಿಕೆಗೆ ಹೆಚ್ಚಿನ ಮಹತ್ವ ನೀಡುತ್ತಿದೆ.

ಸಹಕಾರಿ ಸಂಸ್ಥೆಗಳ ಆನ್‌ಬೋರ್ಡಿಂಗ್ ಖರೀದಿದಾರರಾಗಿ ಸಹಕಾರಿ ಇ ಮಾರುಕ್ಕಟ್ಟೆಗೆ ಅವಕಾಶ ನೀಡಿದೆ .ಸಹಕಾರಿ ಸಂಸ್ಥೆಗಳು, ಜಿಇಎಂ ಮತ್ತು ರಫ್ತು ಪ್ರಚಾರಕ್ಕಾಗಿ ವ್ಯಾಪಾರ; 'ಸಹಕಾರಿ ಸಂಸ್ಥೆಗಳ ಪಾತ್ರ ಇನ್ನೋವೇಶನ್ ಅನ್ನು ಪೋಷಿಸುವುದು, ಸ್ಟಾರ್ಟ್–ಅಪ್‌ಗಳನ್ನು ಉತ್ತೇಜಿಸುವುದು ಮತ್ತು ತಂತ್ರಜ್ಞಾನ ಉನ್ನತೀಕರಣದಲ್ಲಿ ಮತ್ತು 'ಆರ್ಥಿಕ ಸೇರ್ಪಡೆ, ಡಿಜಿಟಲೀಕರಣ ಮತ್ತು ಬಲಪಡಿಸುವಿಕೆ' ಸಹಕಾರ ಅಂಕಿ–ಅಂಶಗಳ ಸಂಗ್ರಹ. ಡೇಟಾಬೇಸ್. ಯುವಕರು, ಮಹಿಳೆಯರು ಮತ್ತು ದುರ್ಬಲರ ಸಾಮೂಹಿಕ ಭಾಗವಹಿಸುವಿಕೆಯೊಂದಿಗೆ ಮತ್ತಷ್ಟು ಬಲಗೊಂಡಿದೆ ವಿಭಾಗಗಳು; ಮತ್ತು ದೇಶದಲ್ಲಿ ಹೆಚ್ಚಿನ ಆರೋಗ್ಯ ಸಹಕಾರಿಗಳ ಉದಯೋನ್ಮುಖ ಅಗತ್ಯ, 'ಯುವಕರು, ಮಹಿಳೆಯರು, ಅಬಲ ವರ್ಗ ಮತ್ತು ಆರೋಗ್ಯ' ಆಚರಣೆ. 'ಸಹಕಾರಿ ಮಾರುಕಟ್ಟೆ, ಗ್ರಾಹಕರು, ಸಂಸ್ಕರಣೆ ಮತ್ತು ಮೌಲ್ಯವರ್ಧನೆ' ಕುರಿತಂತೆ ಸಪ್ತಾಹದ ಸಂಧರ್ಭದಲ್ಲಿ ಕಾರ್ಯಾಗಾರಗಳನ್ನು ಏರ್ಪಡಿಸಿ ಸಪ್ತಾಹವನ್ನು ಯಶಸ್ವಿಯಾಗಿ ಆಚರಣೆ ಮಾಡಲಾಗುತ್ತದೆ. ಜೊತೆಗೆ ಈ ಸಂಧರ್ಭದಲ್ಲಿ ಸಪ್ತಾಹದ ಏಳು ದಿನಗಳ ವಿಷಯಗಳ ಕುರಿತು ಸೆಮಿನಾರ್‌ಗಳು, ಕಾರ್ಯಾಗಾರಗಳು, ಚರ್ಚೆ, ರಸಪ್ರಶ್ನೆ, ಸ್ಪರ್ಧೆಗಳನ್ನು ಆಯೋಜಿಸಲಾಗುತ್ತದೆ.

– ದೀಪಾ ವೈ.ಸಿ.

# ಸಹಕಾರ ಶಿಕ್ಷಣ, ವೃತ್ತಿಪರ ನಿರ್ವಹಣೆಯನ್ನು ಮುಖ್ಯವಾಹಿನಿಗೆ ತರಲು ಪುನರ್ ನಿರ್ಮಾಣ

**ಸಹಕಾರ ಸಂಘಗಳ ಸಿಬ್ಬಂದಿ ಮತ್ತು ಸದಸ್ಯರಿಗೆ ಅವರ ಕರ್ತವ್ಯಗಳು ಮತ್ತು ಜವಾಬ್ದಾರಿಗಳ ಬಗ್ಗೆ ಅವರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ವೃತ್ತಿಪರ ಶಿಕ್ಷಣದ ಅಗತ್ಯವಿದೆ. ಸಹಕಾರ ಶಿಕ್ಷಣವು, ಸಹಕಾರಿ ಸಂಸ್ಥೆಗಳ ಸಾಮರ್ಥ್ಯವನ್ನು ಬೆಳೆಸುವ, ಸಶಕ್ತಗೊಳಿಸುವ ಸಾಧನವಾಗಿ ಕಾರ್ಯನಿರ್ವಹಿಸುತ್ತದೆ. ಸಹಕಾರ ಶಿಕ್ಷಣ ಸದಸ್ಯರ ಅಗತ್ಯಗಳನ್ನು ಪೂರೈಸಲು ಉತ್ತಮ ಗ್ರಾಹಕರಿಗೆ ಸೇವೆಗಳನ್ನು ಒದಗಿಸುವ ಮಾರ್ಗವಾಗಿದೆ. ಪ್ರತಿ ಸಹಕಾರಿ ಸಂಘಕ್ಕೆ ಬಹಳ ಮುಖ್ಯವಾಗಿ "ಸಹಕಾರಿ ಶಿಕ್ಷಣ, ತರಬೇತಿ ಮತ್ತು ಮಾಹಿತಿ" ಇವುಗಳು ಅಗತ್ಯ ಎಂದು ಖಚಿತ ತಿಳಿಸಿದೆ. ಸಹಕಾರಿ ಸಂಸ್ಥೆಗಳ ನೌಕರರು, ನಿರ್ದೇಶಕರು ಮತ್ತು ಸದಸ್ಯರು ಶಿಕ್ಷಣ ಮತ್ತು ತರಬೇತಿ ನೀಡಲು ಎಲ್ಲಾ ರಾಜ್ಯ ಮತ್ತು ಕೇಂದ್ರ ಸಹಕಾರ ಕಾಯಿದೆಗಳಲ್ಲಿ ಪ್ರತಿ ವರ್ಷ ಶಿಕ್ಷಣ ನಿಧಿ ಪೂರೈಸಲು ಅವಕಾಶ ಕಲ್ಪಿಸಿಕೊಡಬೇಕು.**



ಸಹಕಾರ ಸಂಸ್ಥೆಗಳು ಮೂಲತಃ ಸಾಮಾಜಿಕ–ಆರ್ಥಿಕ ಸಂಸ್ಥೆಗಳು. ಇವು ಸಮಾಜದ ಬಡ ಮತ್ತು ಅಬಲ ವರ್ಗಗಳ ಸಾಮಾಜಿಕ ಸಮಾನತೆ ಹಾಗೂ ಆರ್ಥಿಕ ಅಭಿವೃದ್ಧಿಗಾಗಿ ಕೆಲಸ ಮಾಡುತ್ತವೆ. ಆದರೆ, ಯಾವುದೇ ಸಹಕಾರಿ ಸಂಸ್ಥೆಯ ಗುಣಮಟ್ಟವು ಸಿಬ್ಬಂದಿ ಮತ್ತು ಆಡಳಿತ ಮಂಡಳಿ ಸದಸ್ಯರ ದಕ್ಷತೆಯನ್ನು ಅವಲಂಬಿಸಿರುತ್ತದೆ.

ಸಹಕಾರ ಸಂಘಗಳ ಸಿಬ್ಬಂದಿ ಮತ್ತು ಆಡಳಿತ ವರ್ಗದ ಸದಸ್ಯರು ಸಹಕಾರದ ಪರಿಕಲ್ಪನೆಯ ತಿಳುವಳಿಕೆಯನ್ನು ಹೊಂದಿರಬೇಕು ಮತ್ತು ಅವರುಗಳ ನಿಷ್ಠೆ ಮತ್ತು ಬದ್ಧತೆ ಸಹಕಾರ ಸಂಘದ ಕಡೆಗೆ ಸರ್ವೋಚ್ಚವಾಗಿರಬೇಕು. ಸಹಕಾರ ಸಂಘಗಳ ಸಿಬ್ಬಂದಿ ಮತ್ತು ಆಡಳಿತ ಮಂಡಳಿ ಸದಸ್ಯರಿಗೆ ವೃತ್ತಿಪರತೆಯ ದೃಷ್ಟಿಕೋನದಿಂದ ವ್ಯವಸ್ಥಿತ ತರಬೇತಿಯ ಅವಶ್ಯಕತೆಯಿದೆ.

1. ನೌಕರರು ಮತ್ತು ಆಡಳಿತ ಮಂಡಳಿ ಸದಸ್ಯರ ನಿರ್ವಹಣೆಯ ಕಾರ್ಯಕ್ಷಮತೆಯನ್ನು ಸುಧಾರಿಸುವುದು.
2. ಕಾರ್ಮಿಕರ ಕಾರ್ಯಕ್ಷಮತೆಯ ಮತ್ತು ಕೆಲಸದ ನಡುವೆ ಪರಸ್ಪರ ಸಂಬಂಧವನ್ನು ಸ್ಥಾಪಿಸುವುದು.
3. ಕೆಲಸದ ಗುಣಮಟ್ಟವನ್ನು ಸುಧಾರಿಸುವುದು.

ಜುಲೈ 2021ರಲ್ಲಿ ಭಾರತ ಸರ್ಕಾರ ಮೊದಲ ಬಾರಿಗೆ ಪ್ರತ್ಯೇಕ ಸಹಕಾರಿ ಸಚಿವಾಲಯವನ್ನು ಸ್ಥಾಪಿಸಲಾಯಿತು. ಹಿರಿಯ ರಾಷ್ಟ್ರ ನಾಯಕ ಅಮಿತ್ ಶಾ ಅವರಿಗೆ ಇದರ ಉಸ್ತುವಾರಿ ನೀಡಲಾಗಿದೆ. ಸಾಮಾಜಿಕ – ಆರ್ಥಿಕ ವೇಗವನ್ನು ಹೆಚ್ಚಿಸುವ ಸಾಧನವಾಗಿ, ದುರ್ಬಲ ವರ್ಗಗಳ ಅಭಿವೃದ್ಧಿಗಾಗಿ ದೇಶದಲ್ಲಿ ಸಹಕಾರ ಮನೋಭಾವವನ್ನು ಬಲಪಡಿಸಲು "ಸಹಕಾರದಿಂದ ಸಮೃದ್ಧಿ" ಎಂಬ ಮಂತ್ರವನ್ನು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದಾರೆ.

ಭಾರತದ ಸಹಕಾರ ಆಂದೋಲನವು ವಿಶ್ವದ ಅತಿದೊಡ್ಡ ಚಳುವಳಿಯಾಗಿದೆ. ದೇಶದಲ್ಲಿ 8.5ಲಕ್ಷಕ್ಕೂ ಹೆಚ್ಚು ಸಹಕಾರಿ ಸಂಘಗಳು ಸಾಮಾಜಿಕ – ಆರ್ಥಿಕ ಚಟುವಟಿಕೆಗಳ ವಿವಿಧ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿವೆ. ಕೆಲವು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ ಆದರೆ, ಹೆಚ್ಚಿನ ಸಹಕಾರ ಸಂಘಗಳು ಸ್ಪರ್ಧಾತ್ಮಕ ಅಗತ್ಯದ ಕೊರತೆಯಿಂದಾಗಿ ತಮ್ಮ ಗುರಿಗಳನ್ನು ಸಾಧಿಸಲು ಸಾಧ್ಯವಾಗುತ್ತಿಲ್ಲ. ಮುಖ್ಯವಾಗಿ ಇದಕ್ಕೆ ಕಾರಣ, ತರಬೇತಿ ಮತ್ತು ವೃತ್ತಿಪರತೆಯನ್ನು ಹೊಂದಿಲ್ಲದ ಸಿಬ್ಬಂದಿ ಹಾಗೂ ಆಡಳಿತ ಮಂಡಳಿಯನ್ನು ಅವರು ಹೊಂದಿದ್ದಾರೆ.

ಪ್ರಸ್ತುತ ದೇಶದಲ್ಲಿ 117 ಕಿರಿಯ ಸಹಕಾರ ಕೇಂದ್ರಗಳು, 14 ICM ಗಳು, 4 RICMಗಳು, VAMNICOM, NCCE, IRMA, ಮತ್ತು ಕೆಲವು ವಲಯದ ಸಂಸ್ಥೆಗಳು ಸಿಬ್ಬಂದಿ, ನಿರ್ದೇಶಕರು ಮತ್ತು ಸಹಕಾರ ಸಂಸ್ಥೆಗಳ ಸಂಭಾವ್ಯ ಸದಸ್ಯರಿಗೆ ಸಾಮರ್ಥ್ಯ ವೃದ್ಧಿ ಕಾರ್ಯಕ್ರಮಗಳನ್ನು ನಡೆಸುತ್ತಿವೆ. ಬದಲಾಗುತ್ತಿರುವ ಸಾಮಾಜಿಕ–ಆರ್ಥಿಕ ಸನ್ನಿವೇಶದಲ್ಲಿ ಸಹಕಾರಿ ಸಂಸ್ಥೆಗಳ ತರಬೇತಿ ಅಗತ್ಯಗಳನ್ನು ಪರಿಗಣಿಸಿದರೆ, ಅಸ್ತಿತ್ವದಲ್ಲಿರುವ ತರಬೇತಿ ಮತ್ತು ಶಿಕ್ಷಣದ ವ್ಯವಸ್ಥೆಯು ಪ್ರಸ್ತುತ ಅಗತ್ಯಗಳನ್ನು ಪೂರೈಸಲು ಸಾಕಾಗುತ್ತಿಲ್ಲ.

ನೂತನ ಸಹಕಾರ ಸಚಿವಾಲಯವು, ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಉದ್ಯೋಗ ಸೃಷ್ಟಿ, ಮಹಿಳೆಯರು, ಮತ್ತು ಕೌಶಲ್ಯರಹಿತ ಉದ್ಯೋಗಿಗಳ ಆದಾಯ ವೃದ್ಧಿ, ನವೀನ ತಂತ್ರಜ್ಞಾನದ ಮೂಲಕ ಯುವ ಪೀಳಿಗೆಯನ್ನು ಸಹಕಾರ ಕಕ್ಷೆಗೆ ತರುವ ನಿಟ್ಟಿನಲ್ಲಿ ಸಹಕಾರ ಕ್ಷೇತ್ರವನ್ನು ವಿವಿಧ ವಲಯಗಳಲ್ಲಿ ವಿಸ್ತರಿಸಲು ಪರಿಣಾಮಕಾರಿ

ಯೋಜನೆಗಳನ್ನು ಜಾರಿಗೆ ತರಲು ಯೋಚಿಸುತ್ತಿದೆ. ಈ ಮೂಲಕ ನಮ್ಮ ದೇಶದ ಸಾಮಾಜಿಕ – ಆರ್ಥಿಕ ಸಮಸ್ಯೆಗಳಿಗೆ ಪರಿಹಾರಗಳನ್ನು ಒದಗಿಸಲು ಮುಂದಾಗಿದೆ.

ಸಹಕಾರ ಶಿಕ್ಷಣದ ಪ್ರಾಮುಖ್ಯತೆಯನ್ನು ಪರಿಗಣಿಸಿ, ರಾಕ್‌ಡೇಲ್ ಪಯೋನಿಯರ್ಸ್ ಬಹಳ ಹಿಂದೆಯೇ ಸಹಕಾರ ಶಿಕ್ಷಣ ಮಹತ್ವದ ಬಗ್ಗೆ ತಿಳಿಸಿದ್ದಾರೆ. ಸಹಕಾರ ಶಿಕ್ಷಣವನ್ನು ಪ್ರಮುಖ ಸಾಧನವೆಂದು ಪರಿಗಣಿಸಿದ್ದ ಅವರು, ಸಹಕಾರ ಸಂಘಗಳ ಅಗತ್ಯತೆಗಳು ಮತ್ತು ಆಕಾಂಕ್ಷೆಗಳನ್ನು ಪೂರೈಸಲು ತಮ್ಮ ಸದಸ್ಯರ ಸಾಮರ್ಥ್ಯವನ್ನು ಹೆಚ್ಚಿಸುವ ಅಸ್ತ್ರ ಎಂದು ಉಲ್ಲೇಖಿಸಿದ್ದಾರೆ.

ಸಹಕಾರ ಸಂಘಗಳ ಸಿಬ್ಬಂದಿ ಮತ್ತು ಸದಸ್ಯರಿಗೆ ಅವರ ಕರ್ತವ್ಯಗಳು ಮತ್ತು ಜವಾಬ್ದಾರಿಗಳ ಬಗ್ಗೆ ಅವರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ವೃತ್ತಿಪರ ಶಿಕ್ಷಣದ ಅಗತ್ಯವಿದೆ. ಸಹಕಾರ ಶಿಕ್ಷಣವು, ಸಹಕಾರಿ ಸಂಸ್ಥೆಗಳ ಸಾಮರ್ಥ್ಯವನ್ನು ಬೆಳೆಸುವ, ಸಶಕ್ತಗೊಳಿಸುವ ಸಾಧನವಾಗಿ ಕಾರ್ಯನಿರ್ವಹಿಸುತ್ತದೆ. ಸಹಕಾರ ಶಿಕ್ಷಣ ಸದಸ್ಯರ ಅಗತ್ಯಗಳನ್ನು ಪೂರೈಸಲು ಉತ್ತಮ ಗ್ರಾಹಕರಿಗೆ ಸೇವೆಗಳನ್ನು ಒದಗಿಸುವ ಮಾರ್ಗವಾಗಿದೆ.

ಪ್ರತಿ ಸಹಕಾರಿ ಸಂಘಕ್ಕೆ ಬಹಳ ಮುಖ್ಯವಾಗಿ "ಸಹಕಾರಿ ಶಿಕ್ಷಣ, ತರಬೇತಿ ಮತ್ತು ಮಾಹಿತಿ" ಇವುಗಳು ಅಗತ್ಯ ಎಂದು ICA ತಿಳಿಸಿದೆ. ಸಹಕಾರಿ ಸಂಸ್ಥೆಗಳ ನೌಕರರು, ನಿರ್ದೇಶಕರು ಮತ್ತು ಸದಸ್ಯರು ಶಿಕ್ಷಣ ಮತ್ತು ತರಬೇತಿ ನೀಡಲು ಎಲ್ಲಾ ರಾಜ್ಯ ಮತ್ತು ಕೇಂದ್ರ ಸಹಕಾರ ಕಾಯಿದೆಗಳಲ್ಲಿ ಪ್ರತಿ ವರ್ಷ ಶಿಕ್ಷಣ ನಿಧಿ ಪೂರೈಸಲು ಅವಕಾಶ ಕಲ್ಪಿಸಿಕೊಡಬೇಕು.

ಭಾರತ ಸರ್ಕಾರವು ಸಹಕಾರ ಕ್ಷೇತ್ರವನ್ನು ಇತರೆ ಹೊಸ ಕ್ಷೇತ್ರಗಳಿಗೆ ವಿಸ್ತರಿಸುವ ಯೋಜನೆಯನ್ನು ಹೊಂದಿದೆ. ಇದಕ್ಕಾಗಿ, ಯುವ ಸದಸ್ಯರಿಗೆ ವೃತ್ತಿಪರ ತರಬೇತಿ ಅಗತ್ಯವಿದೆ. ಇದರಿಂದ ಸ್ವಯಂ ಉದ್ಯೋಗ ಹೆಚ್ಚುವ ಸಾಧ್ಯತೆ ಇದೆ. ಸಹಕಾರಿ ಶಿಕ್ಷಣ ರಚನೆಯ ಪ್ರಸ್ತುತ ಸ್ಥಿತಿಯನ್ನು ಪರಿಗಣಿಸಿ ಭಾರತ ಸರ್ಕಾರ, ಜಿಲ್ಲಾ ಮಟ್ಟದಿಂದಲೇ ಸಹಕಾರ ಶಿಕ್ಷಣದ ಸುಸಜ್ಜಿತ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸಲು ಮುಂದಾಗಿದೆ.

ವಿವಿಧ ಸಹಕಾರ ಸಂಘಗಳಲ್ಲಿ ಕೆಲಸ ಮಾಡುವ ಸಿಬ್ಬಂದಿಗಳಿಗೆ ಅವರ ಅಗತ್ಯಗಳಿಗೆ ಅನುಗುಣವಾದ ಸಹಕಾರ ಶಿಕ್ಷಣವನ್ನು ಪೂರೈಸಲು ಸರಿಯಾದ ಶಿಕ್ಷಣದ ನಿರ್ವಹಣೆಯನ್ನು ಜಿಲ್ಲಾ ಸಹಕಾರ ಒಕ್ಕೂಟಗಳು ಹೊಂದಿಬೇಕು. ಪ್ರತಿ ಜಿಲ್ಲಾ ಮಟ್ಟದಲ್ಲಿ ಸಹಕಾರ ಇಲಾಖೆ ಮತ್ತು ಸಹಕಾರಿ ಒಕ್ಕೂಟ ಮಾರ್ಗದರ್ಶನ ಮತ್ತು ಸಲಹಾ ಸೇವೆಗಳನ್ನು ಒದಗಿಸಬೇಕು. ಅದೇ ರೀತಿ ಒಂದು ರಾಜ್ಯ ಮಟ್ಟದ ಸಹಕಾರ ಸಂಸ್ಥೆ, ಸಹಕಾರಿ ಶಿಕ್ಷಣ ಮತ್ತು ತರಬೇತಿಯನ್ನು ರಾಜ್ಯ ಮಟ್ಟದ ಅಪೆಕ್ಸ್ ಸಹಕಾರ ಸಂಸ್ಥೆಗಳ ಸಿಬ್ಬಂದಿ ಮತ್ತು ಮಂಡಳಿಯ ಸದಸ್ಯರಿಗೆ ನೀಡಬೇಕು.

ಭಾರತದ ರಾಷ್ಟ್ರೀಯ ಸಹಕಾರಿ ಯೂನಿಯನ್ನು (NCUI) ಇತರ ರಾಷ್ಟೀಯ ಮಟ್ಟದ ಸಂಸ್ಥೆಗಳ ಸಹಯೋಗದೊಂದಿಗೆ ರಾಷ್ಟ್ರೀಯ ಮಟ್ಟದ ಮತ್ತು ಬಹುರಾಜ್ಯ ಸಹಕಾರಿ ಸಂಘಗಳಿಗೆ ಶಿಕ್ಷಣ ಮತ್ತು ತರಬೇತಿ ಅಗತ್ಯ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವ ಯೋಜನೆಗಳನ್ನು ರೂಪಿಸಬೇಕು. ಡೇಟಾಬೇಸ್/ಮಾಹಿತಿ ಹಾಗೂ ಸಂಶೋಧನೆಗಳಿಗಾಗಿ ಭಾರತದ ರಾಷ್ಟ್ರೀಯ ಸಹಕಾರಿ ಯೂನಿಯನ್ನು ಉಪಯುಕ್ತ ಯೋಜನೆಗಳನ್ನು ಹಾಕಿಕೊಳ್ಳಬೇಕು. ಸಹಕಾರ ಕ್ಷೇತ್ರ ತ್ವರಿತ ಬೆಳವಣಿಗೆಗೆ ಸಂಶೋಧನೆಗಳ ಆಧಾರದ ಮೇಲೆ ನಿಯಮಿತ ಅಧ್ಯಯನಗಳನ್ನು ವಿವಿಧ ಅಂಶಗಳ ಮೇಲೆ ಕೈಗೊಳ್ಳಬೇಕಾಗಿದೆ.

ಭಾರತೀಯ ಆರ್ಥಿಕತೆಯನ್ನು ಬಲಪಡಿಸಲು ಮತ್ತು ಸ್ವಯಂ ಉದ್ಯೋಗವನ್ನು ಒದಗಿಸಲು ಸಹಕಾರ ಕ್ಷೇತ್ರದಲ್ಲಿ ಯುವಕರಿಗೆ ವಿಶಾಲ ಅವಕಾಶಗಳಿವೆ. ಇದಕ್ಕಾಗಿ ಶಾಲಾ ಕಾಲೇಜುಗಳಲ್ಲಿ, ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳಿಗೆ ಸಹಕಾರ ಕ್ಷೇತ್ರದ ಜ್ಞಾನ ಹಾಗೂ ಅರಿವು ಮೂಡಿಸಿ ಯುವ ಜನರಿಂದ ಸಹಕಾರಿ ಕ್ಷೇತ್ರದಲ್ಲಿ ಉದ್ಯಮಗಳನ್ನು ಸ್ಥಾಪಿಸಿ, ಅವರನ್ನು ಉದ್ಯಮಶೀಲರನ್ನಾಗಿ ರೂಪಿಸಬೇಕಾಗಿದೆ.

ಸಹಕಾರ ಶಿಕ್ಷಣವು ಬಹಳ ಸಂಕೀರ್ಣವಾದ ಪ್ರಕ್ರಿಯೆಯಾಗಿದೆ. ಶಿಕ್ಷಣ ಕಾರ್ಯಕ್ರಮಗಳ ವಿಶ್ಲೇಷಣೆ, ಓದುವ ಸಾಮಗ್ರಿಗಳನ್ನು ಅಧ್ಯಯನದ ಆಧಾರದ ಮೇಲೆ ಸಿದ್ಧಪಡಿಸುವುದು ಮತ್ತು ಇತ್ತೀಚಿನ ಸಹಕಾರ ಕ್ಷೇತ್ರದ ಪ್ರವೃತ್ತಿಗಳ ವಿಶ್ಲೇಷಣೆ ಮುಖ್ಯವೆನಿಸಿವೆ. ಸಹಕಾರ ಶಿಕ್ಷಣದ ವ್ಯಾಪ್ತಿ ವಿಶಾಲವಾಗಿದ್ದು, ಸುಮಾರು 30 ಕೋಟಿ ಸದಸ್ಯರಿದ್ದಾರೆ. ಉಳಿದವರು ಸಂಭಾವ್ಯ ಸದಸ್ಯರು. ಆದ್ದರಿಂದ ಶಾಲೆಗಳು, ಕಾಲೇಜುಗಳು ಮತ್ತು ವಿಶ್ವವಿದ್ಯಾನಿಲಯಗಳ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಿ ಸಹಕಾರಿ ಸಂಸ್ಥೆಗಳ ಮೂಲಕ ಉದ್ಯೋಗದ ಮಾರ್ಗಗಳನ್ನು ಅನ್ವೇಷಿಸುವ ದೊಡ್ಡ ಅವಶ್ಯಕತೆಯೂ ಇದೆ.

ಭಾರತದಲ್ಲಿರುವ ಬೃಹತ್ ಸದಸ್ಯ ಬಳಗ ಹಾಗೂ ಯುವ ಜನತೆಗೆ ಸಹಕಾರ ಶಿಕ್ಷಣ ನಡೆಸಲು ಡಿಜಿಟಲ್ ತಂತ್ರಜ್ಞಾನಕ್ಕೆ ಹೊಂದಿಕೊಂಡು ಆನ್‌ಲೈನ್ ಮತ್ತು ದೂರ ಶಿಕ್ಷಣದ ಶೈಕ್ಷಣಿಕ ಕಾರ್ಯಕ್ರಮಗಳನ್ನು ಅಳವಡಿಸಿಕೊಳ್ಳಬೇಕು. ಸಹಕಾರ ಶಿಕ್ಷಣವನ್ನು ಹರಡಲು ಮಾಧ್ಯಮ ಸೇರಿದಂತೆ ದೂರದರ್ಶನ, ರೇಡಿಯೋ, ಪಾಡ್‌ಕಾಸ್ಟ್‌ಗಳು, ಮೊಬೈಲ್ ಆಧಾರಿತ ತಂತ್ರಜ್ಞಾನವನ್ನು ಸಹ ಬಳಸಬೇಕಾಗುತ್ತದೆ. ಈ ಹಂತದಲ್ಲಿ ಸಹಕಾರಿ ಶಿಕ್ಷಣವನ್ನು ಮುಖ್ಯವಾಹಿನಿಗೆ ತರುವುದು ಕೂಡ ಅಷ್ಟೇ ಮುಖ್ಯವಾಗಿದೆ. ಶಾಲಾ ಕಾಲೇಜುಗಳ ಮತ್ತು ವಿಶ್ವವಿದ್ಯಾಲಯಗಳು ಪಠ್ಯಕ್ರಮದಲ್ಲಿ ಸಹಕಾರಿ ಶಿಕ್ಷಣವನ್ನು ನಿರ್ಲಕ್ಷಿಸಿವೆ. ಕೆಲವು ವಿಶ್ವವಿದ್ಯಾಲಯಗಳು ಸಹಕಾರ ವಿಷಯದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿಯನ್ನು ನೀಡುತ್ತಿವೆ.

ಸರ್ಕಾರ ಮುಂದಿನ ಐದು ವರ್ಷಗಳಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು 3 ಲಕ್ಷಕ್ಕೆ ಹೆಚ್ಚಿಸುವ ಗುರಿಯನ್ನು ಹೊಂದಿದೆ. ಈ ನಿಟ್ಟಿನಲ್ಲಿ ಪ್ಯಾಕ್ಸ್‌ಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ತರಬೇತಿ ನೀಡುವಲ್ಲಿ ಹೆಚ್ಚಿನ ಒತ್ತು ನೀಡಬೇಕಾಗಿದೆ. ಉತ್ತಮ ಮತ್ತು ಪರಿಣಾಮಕಾರಿ ಸಹಕಾರ ಶಿಕ್ಷಣ ಮತ್ತು ತರಬೇತಿಯಿಂದ ದೇಶದ ಮತ್ತು ಸಮಾಜದ ಅಬಲ ವರ್ಗದ ಸಮಾಜಿಕ – ಆರ್ಥಿಕ ಪ್ರಗತಿ ಆಗಲು ಸಾಧ್ಯ.

– ಮಂಜುನಾಥ ನಾಗಠಾಣ

# ಆವಿಷ್ಕಾರ ಪೋಷಣೆ, ಸ್ಟಾರ್ಟ್-ಅಪ್‌ಗಳಿಗೆ ಉತ್ತೇಜನ ಮತ್ತು ತಂತ್ರಜ್ಞಾನದ ಉನ್ನತೀಕರಣದಲ್ಲಿ ಸಹಕಾರ ಸಂಸ್ಥೆಗಳ ಪಾತ್ರ




ಸಹಕಾರ ಸಂಸ್ಥೆಗಳ ಯಶಸ್ಸಿಗೆ ಅನ್ವೇಷಣೆ ಮತ್ತು ಆವಿಷ್ಕಾರ ಪ್ರಮುಖವಾದುವು. ಆವಿಷ್ಕಾರ ಅನ್ನುವುದು ವೃತ್ತಿಪರತೆಯ ಪ್ರಮುಖ ಅಂಶವಾಗಿದ್ದು, ವೃತ್ತಿಪರತೆ ಇಲ್ಲದೆ ಸಹಕಾರ ಸಂಸ್ಥೆಗಳು ಮಾರುಕಟ್ಟೆ ಆರ್ಥಿಕತೆಯಲ್ಲಿ ಸ್ಪರ್ಧಿಸಲು ಸಾಧ್ಯವಿಲ್ಲ. ಇಂದು ಸಹಕಾರ ಸಂಸ್ಥೆಗಳನ್ನು ಆಧುನಿಕ ತಂತ್ರಜ್ಞಾನಗಳ ಮೂಲಕ ಉನ್ನತೀಕರಿಸಲು ಮುಂದಾಗಿರುವ ನೂತನ ಸಹಕಾರ ಸಚಿವಾಲಯದ ಹೊಸ ಯೋಜನೆಗಳಿಗೆ ಸರ್ಕಾರ ಒತ್ತು ನೀಡುತ್ತಿದೆ.

ದೇಶದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಬಲವರ್ಧನೆ ಸರ್ಕಾರ ಮುಖ್ಯ ಗುರಿಯಾಗಿದೆ. ಪ್ಯಾಕ್ಸ್‌ಗಳ ಡಿಜಿಟಲೀಕರಣವು ಪ್ರಮುಖ ಆದ್ಯತೆಗಳಲ್ಲಿ ಒಂದಾಗಿದ್ದು, ಸರ್ಕಾರ ಪ್ಯಾಕ್ಸ್‌ಗಳ ಡಿಜಿಟಲೀಕರಣಕ್ಕೆ ರೂ. 2,516 ಕೋಟಿಗಳನ್ನು ಮೀಸಲಿರಿಸಿದೆ. ಈ ಯೋಜನೆಯಿಂದ ಸುಮಾರು 13 ಕೋಟಿ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಅನುಕೂಲವಾಗಲಿದೆ. ಹಳೆಯ ಲೆಕ್ಕಪತ್ರಗಳ ಡಿಜಿಟಲೀಕರಣ ಮತ್ತು ಕ್ಲೌಡ್ ಆಧಾರಿತ ಸಾಫ್ಟ್‌ವೇರ್‌ಗೆ ಲಿಂಕ್ ಮಾಡುವುದನ್ನು ಒಳಗೊಂಡಂತೆ ಪ್ರತಿ ಪ್ಯಾಕ್ಸ್‌ಗೆ ಅದರ ಸಾಮರ್ಥ್ಯವನ್ನು ನವೀಕರಿಸಲು ಸುಮಾರು ರೂ. 4 ಲಕ್ಷ ವ್ಯಯವಾಗಬಹುದೆಂಬ ಅಂದಾಜಿದೆ. ಪ್ಯಾಕ್ಸ್‌ಗಳ ಗಣಕೀಕರಣದಿಂದ ಪಾರದರ್ಶಕತೆ, ವಿಶ್ವಾಸಾರ್ಹತೆ ಮತ್ತು ದಕ್ಷತೆ ಹೆಚ್ಚುವುದಲ್ಲದೆ ಲೆಕ್ಕಪತ್ರ ನಿರ್ವಹಣೆಗೆ ಅನುಕೂಲವಾಗಲಿದೆ.

ಪ್ಯಾಕ್ಸ್‌ಗಳು ರೈತರಿಗೆ ಕೃಷಿಗಾಗಿ ಮತ್ತು ಕೃಷಿ ಚಟುವಟಿಕೆಗಳಿಗಾಗಿ ಅಲ್ಪಾವಧಿ ಮತ್ತು ಮಧ್ಯಮಾವಧಿಯ ಸಾಲಗಳನ್ನು ಒದಗಿಸುವ ತಳಮಟ್ಟದ ಪತ್ತಿನ ಸಂಸ್ಥೆಗಳಾಗಿವೆ. ಅನೇಕ ನಿಷ್ಕ್ರಿಯ ಮತ್ತು ದುರ್ಬಲ ಪ್ಯಾಕ್ಸ್‌ಗಳನ್ನು ಇತ್ತೀಚಿನ ಆಧುನಿಕ ತಂತ್ರಜ್ಞಾನಗಳ ಮೂಲಕ ಬಲಪಡಿಸಿ ಮುಖ್ಯವಾಹಿನಿಗೆ ತರಬೇಕಾದ ಅಗತ್ಯವಿದೆ. ಪ್ಯಾಕ್ಸ್‌ಗಳ ಡಿಜಿಟಲೀಕರಣದಿಂದ, ಡೈರೆಕ್ಟ್ ಬೆನಿಫಿಟ್ ಟ್ರಾನ್ಸ್‌ಫರ್ (DBT), ಬಡ್ಡಿ ಸಬ್ವೆನ್ಷನ್‌ನಂತಹ ವಿವಿಧ ಸೇವೆಗಳು ಯೋಜನೆ, (PMFBY) ಬೆಳೆ ವಿಮಾಗಳಂತಹ ಯೋಜನೆಗಳನ್ನು ರೈತರಿಗೆ ಸಮರ್ಪಕವಾಗಿ ತಲುಪಿಸುವಲ್ಲಿ ಸಹಾಯ ಮಾಡುತ್ತದೆ. ಈ ಕ್ರಮವು ಹೆಚ್ಚಿನ ಉದ್ಯೋಗಗಳನ್ನು ಸೃಷ್ಟಿಸುವುದಲ್ಲದೆ, ಪ್ಯಾಕ್ಸ್‌ಗಳ ಸೇವೆಗಳ ಗುಣಮಟ್ಟವನ್ನು ಹೆಚ್ಚಿಸುತ್ತದೆ.

ಮುಂದಿನ 5 ವರ್ಷಗಳಲ್ಲಿ ಪ್ಯಾಕ್ಸ್‌ಗಳ ಸಂಖ್ಯೆಯನ್ನು 3 ಲಕ್ಷಕ್ಕೆ ಹೆಚ್ಚಿಸುವ ಮಹತ್ವಾಕಾಂಕ್ಷೆಯ ಗುರಿಯನ್ನು ಸರ್ಕಾರ ಹೊಂದಿದೆ. ಸರ್ಕಾರದ ನೀತಿ ನಿರೂಪಣೆಗಾಗಿ ಪ್ಯಾಕ್ಸ್‌ಗಳನ್ನು ವಿವಿಧೋದ್ದೇಶ ಸಹಕಾರಿ ಸಂಘಗಳಾಗಿ ಪರಿವರ್ತಿಸುವ ಮತ್ತು ಅವುಗಳ ಚಟುವಟಿಕೆಗಳನ್ನು ವೈವಿಧ್ಯಗೊಳಿಸುವ ಅಗತ್ಯವಿದೆ. ಈ ವಿನೂತನ ಯೋಜನೆಯ ಅನುಷ್ಠಾನಕ್ಕೆ ತಂತ್ರಜ್ಞಾನದ ಮೂಲಕ ಬೆಂಬಲಿಸುವ ಅಗತ್ಯವಿದೆ. ಪ್ಯಾಕ್ಸ್‌ಗಳ ಕಾರ್ಯನಿರ್ವಹಣೆಯನ್ನು ರಾಜ್ಯ ಸಹಕಾರಿ ಬ್ಯಾಂಕುಗಳು, ಜಿಲ್ಲಾ ಸಹಕಾರಿ ಬ್ಯಾಂಕುಗಳು ಮತ್ತು ನಬಾರ್ಡ್‌ನೊಂದಿಗೆ ಲಿಂಕ್ ಮಾಡಲು ಸಾಫ್ಟ್‌ವೇರ್ ಅನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಇದನ್ನು ನಾವು ಡಿಜಿಟಲೀಕರಣದತ್ತ ಸರ್ಕಾರ ದೊಡ್ಡ ಹೆಜ್ಜೆ ಎನ್ನಬಹುದು.

ಇತ್ತೀಚಿನ ದಿನಗಳಲ್ಲಿ ಸಹಕಾರ ಸಂಸ್ಥೆಗಳು ತಂತ್ರಜ್ಞಾನಗಳನ್ನು ಬಳಸಲು ಮುಂದಾಗಿವೆ. ಆದರೆ, ತಮ್ಮ ಸ್ವಂತ ಅಗತ್ಯಗಳಿಗೆ ತಕ್ಕಂತೆ ತಂತ್ರಜ್ಞಾನವನ್ನು ರಚಿಸುವ ಸವಾಲನ್ನು ಎದುರಿಸಬೇಕಾಗಿದೆ. ಸಹಕಾರಿ ಸಂಘಗಳು ಕೇವಲ ವ್ಯಾಪಾರ ಮಾಡುವ ಸಂಸ್ಥೆಗಳಾಗದೆ, ಸಾಮಾಜಿಕ ಕಳಕಳಿಯನ್ನು ಹೊಂದಿರುವ, ವೈವಿಧ್ಯಮಯ ಹಿನ್ನೆಲೆಯ ಜನರನ್ನು ಒಳಗೊಂಡ ಚುನಾಯಿತ ಆಡಳಿತ ಮಂಡಳಿಗಳಿಂದ ನಡೆಸಲ್ಪಡುತ್ತವೆ. ಸಹಕಾರ ಸಂಸ್ಥೆಗಳು ತನ್ನ ಪಾಲುದಾರರೊಂದಿಗೆ ಬಲವಾದ ಸಂಬಂಧವನ್ನು ಕಾಪಾಡಿಕೊಂಡು, ಖಾಸಗಿಯೊಂದಿಗೆ ಸ್ಪರ್ಧಿಸಬೇಕಾದರೆ ಆಧುನಿಕತೆ ಮತ್ತು ನಾವಿನ್ಯತೆಗಳನ್ನು ಅಳವಡಿಸಿಕೊಳ್ಳಬೇಕಾದ ಅನಿವಾರ್ಯವಿದೆ.

ಭಾರತದ ರಾಷ್ಟ್ರೀಯ ಸಹಕಾರ ಒಕ್ಕೂಟ (NCUI) ಇತ್ತೀಚೆಗೆ NCUI Haat ಅನ್ನು ಪ್ರಾರಂಭಿಸಿದೆ. ಇದು ಸಹಕಾರ ಸಂಘ ಮತ್ತು ಸ್ವ-ಸಹಾಯ ಗುಂಪುಗಳಿಗೆ ಮಧ್ಯವರ್ತಿಗಳ ಹಸ್ತಕ್ಷೇಪವಿಲ್ಲದೆ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡಲು ಉಚಿತ ಮಾರುಕಟ್ಟೆಯ ವ್ಯವಸ್ಥೆಯನ್ನು ಒದಗಿಸುತ್ತದೆ. ವ್ಯಾಪಾರ ನಾವೀನ್ಯತೆಯ ಸಂದರ್ಭದಲ್ಲಿ ಜಾಗತಿಕ ಖ್ಯಾತಿಯ ಸಹಕಾರಿ ಸಂಸ್ಥೆ ಇಫ್ಕೋ ಇತ್ತೀಚೆಗಷ್ಟೇ ತನ್ನ ನವೀನ ಉತ್ಪನ್ನವಾದ ನ್ಯಾನೋ ಯೂರಿಯಾವನ್ನು ಬಿಡುಗಡೆ ಮಾಡಿದೆ. ಇದು ಸಾಂಪ್ರದಾಯಿಕ ರಾಸಾಯನಿಕ ಗೊಬ್ಬರಗಳ ಬಳಕೆಯನ್ನು 50% ರಷ್ಟು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಸುಮಾರು 8% ತೈಲ ಆರೋಗ್ಯವನ್ನು ಸುಧಾರಿಸಿ, ಹವಾಮಾನದ ಸಮಸ್ಯೆಗಳನ್ನು ತಡೆಗಟ್ಟುತ್ತದೆ.

# ಮಲೆನಾಡು ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿಗೆ ಕೆ.ಕೆ. ಮಹೇಂದ್ರಪ್ರಸಾದ್‌ಗೌಡ ಹಾಗೂ ಡಿ.ಆರ್. ನಾಗೇಶಪ್ಪ ಭೇಟಿ



ಮಲೆನಾಡು ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ಲಿ., ಶಿವಮೊಗ್ಗ ಈ ಸಹಕಾರ ಸಂಘಕ್ಕೆ ಪತ್ತಿನ ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ.ಕೆ.ಮಹೇಂದ್ರಪ್ರಸಾದ್ ಗೌಡ ರವರು ಹಾಗೂ ಶ್ರೀ ಡಿ.ಆರ್. ನಾಗೇಶಪ್ಪರವರು ಭೇಟಿ ನೀಡಿದ ಸಂದರ್ಭ.

ಭಾರತವನ್ನು ಸ್ಟಾರ್ಟ್-ಅಪ್‌ಗಳ ಸಂಖ್ಯೆಯಲ್ಲಿ ಮೂರನೇ ಅತಿದೊಡ್ಡ ದೇಶವಾಗಿದೆ ಎಂದು ನೀತಿ ಆಯೋಗ್ ಸ್ಟ್ರ್ಯಾಟೆಜಿ ಡಾಕ್ಯುಮೆಂಟ್ ಫಾರ್ ನ್ಯೂ ಇಂಡಿಯಾ @ 75 ತಿಳಿಸಿದೆ. 'ಸ್ಟಾರ್ಟ್ ಅಪ್ ಇಂಡಿಯಾ' ಎಂಬ ಬಲವಾದ ವ್ಯವಸ್ಥೆಯನ್ನು ತರಲು ಉದ್ದೇಶಿಸಿರುವ ಭಾರತ ಸರ್ಕಾರ, ದೇಶದಲ್ಲಿ ಆರ್ಥಿಕ ಬೆಳವಣಿಗೆಗೆ ಕಾರಣವಾಗುವ ಹೊಸ ಆಲೋಚನೆಗಳು ಮತ್ತು ಸ್ಟಾರ್ಟ್-ಅಪ್‌ಗಳನ್ನು ಉತ್ತೇಜಿಸಲು ಮತ್ತು ದೊಡ್ಡ ಪ್ರಮಾಣದ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಮುಂದಾಗಿದೆ.

ಎನ್‌ಸಿಡಿಸಿಯು ಸಹಕಾರಿ ಎಂಟರ್‌ಪ್ರೈಸ್ ಬೆಂಬಲ ಮತ್ತು ನಾವೀನ್ಯತೆ ಯೋಜನೆಯನ್ನು ಪ್ರಾರಂಭಿಸಿರುವುದು ಸಹಕಾರಿ ಕ್ಷೇತ್ರದಲ್ಲಿ ಸ್ಟಾರ್ಟ್-ಅಪ್‌ಗಳ ದೊಡ್ಡ ಉತ್ತೇಜನವನ್ನು ಪಡೆದಿದೆ. ಈ ಯೋಜನೆಯನ್ನು ಎನ್‌ಸಿಡಿಸಿಯಿಂದ ರಚಿಸಲಾದ ರೂ. 100 ಕೋಟಿಗಳ, ಸ್ಟಾರ್ಟ್-ಅಪ್ ಮತ್ತು ಇನ್ನೋವೇಶನ್ ಫಂಡ್‌ಗೆ (CISF) ಲಿಂಕ್ ಮಾಡಲಾಗಿದೆ. ಈ ಯೋಜನೆಯು ಸಹಕರ ಕ್ಷೇತ್ರಕ್ಕೆ ಹೊಸ ರೂಪ ನೀಡುವ ಗುರಿಯನ್ನು ಹೊಂದಿದೆ. ಸಹಕಾರ ಕ್ಷೇತ್ರದಲ್ಲಿ ಹೊಸ ಸ್ಟಾರ್ಟ್ ಅಪ್‌ಗಳನ್ನು ಉತ್ತೇಜಿಸುವ ದೃಷ್ಟಿಯಿಂದ ಆಕರ್ಷಕ ಸಾಲಗಳ ಮೂಲಕ ಕೃಷಿ ಮತ್ತು ಸಂಬಂಧಿತ ವಲಯಗಳಾದ ಕೋಳಿ, ಡೈರಿ, ಮೀನುಗಾರಿಕೆ, ಸಣ್ಣ ಮತ್ತು ಅತಿ ಸಣ್ಣ ರೈತರನ್ನು ಪ್ರೋತ್ಸಾಹಿಸಲಾಗುತ್ತಿದೆ. ಈ ಯೋಜನೆಯನ್ನು ಪ್ರಾರಂಭಿಸುವ ಮೂಲಕ ಯುವಕರನ್ನು ಸಹಕಾರ ಕ್ಷೇತ್ರದತ್ತ ಆಕರ್ಷಿಸಲು ಸಾಧ್ಯವಾಗಲಿದೆ.

ರೂ. 60 ಕೋಟಿ ಬಜೆಟ್‌ನಲ್ಲಿ ಡಿಜಿಟಲ್ ಕೃಷಿ ಮತ್ತು ಸ್ಟಾರ್ಟ್-ಅಪ್‌ಗಳು, ಪ್ಯಾಕ್ಸ್, ಡೈರಿ, ಸಕ್ಕರೆ ವಲಯ, ಮಲ್ಟಿಸ್ಟೇಟ್ ಸಹಕಾರಿ ಸಂಸ್ಥೆಗಳಿಗೆ ಶಕ್ತಿ ತುಂಬುವ ನಿರೀಕ್ಷೆಯಿದೆ. ಯುವ ರೈತ ಉದ್ಯಮಿಗಳನ್ನು ಸಬಲೀಕರಣಗೊಳಿಸುವ ಅಗತ್ಯವಿದೆ. ಹವಾಮಾನ ಬದಲಾವಣೆ, ನೀರಿನ ಕೊರತೆ ಇನ್ನಿತರ ಸವಾಲುಗಳ ಹಿನ್ನೆಲೆಯಲ್ಲಿ ಕೃಷಿ ಮತ್ತು ಸಂಬಂಧಿತ ವಲಯಗಳ ಮಾರುಕಟ್ಟೆ ವಿಸ್ತರಣೆ ಮತ್ತು ಉದ್ಯೋಗ ಸೃಷ್ಟಿ ಸೇರಿದಂತೆ ಸಹಕಾರ ಚಳುವಳಿಯ ಪ್ರಗತಿಗೆ ಸರ್ಕಾರದಿಂದ ಇನ್ನಷ್ಟು ಹೊಸ ಯೋಜನೆಗಳನ್ನು ರೂಪಿಸಬೇಕು. ಎಲ್ಲಕ್ಕಿಂತ ಮುಖ್ಯವಾಗಿ ಸಹಕಾರಿ ಸಂಸ್ಥೆಗಳಿಗೆ ಸ್ಟಾರ್ಟ್-ಅಪ್‌ಗಳೆಂದು ಮನ್ನಣೆ ಸಿಗಬೇಕು. ಸಹಕಾರ ಸಂಸ್ಥೆಗಳು ಸ್ಟಾರ್ಟ್-ಅಪ್ ಇಂಡಿಯಾ ಕಾರ್ಯಕ್ರಮದ ಅಡಿಯಲ್ಲಿ ವಿವಿಧ ಹಣಕಾಸಿನ ಸವಲತ್ತುಗಳನ್ನು ಪಡೆದುಕೊಳ್ಳುವಂತಾಗಬೇಕು. ಹೊಸ ಶಿಕ್ಷಣ ನೀತಿಯು ಸ್ಟಾರ್ಟ್-ಅಪ್‌ಗಳನ್ನು ಉತ್ತೇಜಿಸುತ್ತಿದ್ದು, ಸರ್ಕಾರದ ವ್ಯವಸ್ಥೆಯೊಂದಿಗೆ ಸಹಕಾರಿ ವಿಶ್ವವಿದ್ಯಾನಿಲಯಗಳು ಸ್ಟಾರ್ಟ್-ಅಪ್‌ಗಳ ಸ್ಥಾಪನೆಯನ್ನು ಉತ್ತೇಜಿಸಲು ಉತ್ತಮ ವೇದಿಕೆಯಾಗಿವೆ. ಶಾಲೆಗಳು, ಕಾಲೇಜುಗಳು ಮತ್ತು ವಿಶ್ವವಿದ್ಯಾನಿಲಯಗಳಲ್ಲಿ ಎನ್‌ಸಿಯುಐ ತನ್ನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ, ವಿದ್ಯಾರ್ಥಿಗಳನ್ನು ಸಹಕಾರಿ ಕಕ್ಷೆಯೊಳಗೆ ತರುವ ಪ್ರಯತ್ನ ಮಾಡುತ್ತಿದೆ. ಸಹಕಾರ ಸ್ಟಾರ್ಟ್-ಅಪ್‌ಗಳನ್ನು ಪ್ರಾರಂಭಿಸಿ ವೃತ್ತಿ ಜೀವನವನ್ನು ಪ್ರಾರಂಭಿಸುವಂತೆ ಒತ್ತು ನೀಡುತ್ತಿದೆ.

-ಸುಧಾ ಪಾಟೀಲ

# ಕನ್ನಡ ರಾಜ್ಯೋತ್ಸವ ಆಚರಣೆ; ಕೋಟಿ ಕಂಠಗಾಯನ ಕಾರ್ಯಕ್ರಮ



ಕರ್ನಾಟಕ ರಾಜ್ಯ ಪರಿಸರ ಪ್ರವಾಸೋದ್ಯಮ ಮತ್ತು ಅಭಿವೃದ್ಧಿ ಸಹಕಾರ ಸಂಘ ನಿ., ಶಿಕಾರಿಪುರ, ಕರ್ನಾಟಕ ರಾಜ್ಯ ಜಾನಪದ ಕಲಾವಿದ ಸಹಕಾರ ಸಂಘ ನಿ., ಶಿಕಾರಿಪುರ ಮತ್ತು ಬಸವೇಶ್ವರ ಸಹಕಾರಿ ಒಕ್ಕೂಟ, ಶಿಕಾರಿಪುರ ಇವುಗಳ ಸಂಯುಕ್ತಾಶ್ರಯದಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಕಾರ್ಯಕ್ರಮದ ಧ್ವಜಾರೋಹಣವನ್ನು ಕರ್ನಾಟಕ ರಾಜ್ಯ ತೋಟಗಾರಿಕಾ ಮಹಾಮಂಡಳದ ಅಧ್ಯಕ್ಷರಾದ ಶ್ರೀಯುತ ಡಾ. ಬಿ.ಡಿ. ಭೂಕಾಂತ ಅವರು ಹಾಗೂ ಕರ್ನಾಟಕ ರಾಜ್ಯ ಪರಿಸರ ಪ್ರವಾಸೋದ್ಯಮದ ಅಧ್ಯಕ್ಷರಾದ ಲೋಕೇಶ್ವರವರು ನಡೆಸಿಕೊಟ್ಟರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವೇಶ್ವರ ಸಹಕಾರಿ ಒಕ್ಕೂಟದ ಅಧ್ಯಕ್ಷರಾದ ಮಮತ ಚಂದ್ರಕುಮಾರ ಅವರು ವಹಿಸಿಕೊಂಡಿದ್ದರು.

ಧ್ವಜಾರೋಹಣ ಕಾರ್ಯಕ್ರಮ ಮುಗಿದ ನಂತರ ಕೋಟಿ ಕಂಠ ಗಾಯನದಲ್ಲಿನ ಗೀತೆಗಳಾದ ನಾಡಗೀತೆ, ಹಚ್ಚೇವು ಕನ್ನಡದ ದೀಪಾ, ವಿಶ್ವವಿನೂತನ, ಬಾರಿಸು ಕನ್ನಡ ಡಿಂಡಿಮವ, ಹುಟ್ಟಿದರೇ ಕನ್ನಡ ನಾಡಲ್ಲಿ ಹುಟ್ಟಬೇಕು... ಗೀತೆಗಳನ್ನು ಬಸವೇಶ್ವರ ಸಹಕಾರಿ ಒಕ್ಕೂಟದ ಎಲ್ಲಾ ಪದಾಧಿಕಾರಿಗಳು ಏಕ ಕಾಲದಲ್ಲಿ ಹಾಡಿದರು. ಹಾಗೂ ಈ ಕಾರ್ಯಕ್ರಮಕ್ಕೆ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನ ಶಿವಮೊಗ್ಗ ಇದರ ಅಧ್ಯಕ್ಷರಾದ ಚನ್ನವೀರಪ್ಪರವರು ಆಗಮಿಸಿದ್ದರು.

ನಂತರ ನೂತನವಾಗಿ ಶ್ರೀ ಬಸವೇಶ್ವರ ಸಹಕಾರಿ ಒಕ್ಕೂಟ ಸಂಘ ನಿ., ಶಿಕಾರಿಪುರ ಇದರ ಸಂಘದ ಉದ್ಘಾಟನಾ ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ಜಾನಪದ ಕಲಾವಿದರ ಸಹಕಾರ ಸಂಘದ ಅಧ್ಯಕ್ಷರಾದ ನಾಗರಾಜ ರವರು ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ವಿವಿಧ ಸಹಕಾರ ಸಂಘಗಳ ನಿರ್ದೇಶಕರುಗಳಿಗೆ ಅಭಿನಂದನಾ ಕಾರ್ಯಕ್ರಮವನ್ನು ಸಹ ಮಾಡಲಾಯಿತು.

ಈ ಕಾರ್ಯಕ್ರಮಕ್ಕೆ ಮಹಿಳಾ ಮಹಾಮಂಡಳದ ನಿರ್ದೇಶಕರುಗಳು, ಚಲನಚಿತ್ರ ಲಲಿತಕಲಾ ಮಹಾಮಂಡಳ ನಿರ್ದೇಶಕರು, ಡಿ.ಸಿ.ಸಿ. ಬ್ಯಾಂಕ್ ನಿರ್ದೇಶಕರುಗಳು, ವಿವಿಧ ಸಹಕಾರ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ನಿರ್ದೇಶಕರು, ಸಿಬ್ಬಂದಿಗಳು ಭಾಗವಹಿಸಿದ್ದರು.

## ಶ್ರೀ ಗೊಮ್ಮಟೇಶ ಅರ್ಬನ್ ಕೋ-ಆಪ್ ಕ್ರೆಡಿಟ್ ಸೊಸಾಯಿಟಿಯಿಂದ ಕಟ್ಟಡ ದೇಣಿಗೆ ಚೆಕ್ಕನ್ನು ಸಲ್ಲಿಕೆ



ಶ್ರೀ ಗೊಮ್ಮಟೇಶ ಅರ್ಬನ್ ಕೋ–ಆಪ್ ಕ್ರೆಡಿಟ್ ಸೊಸಾಯಿಟಿ ಲಿ., ಕೋಥಳಿ, ಬೆಳಗಾವಿ ಇದರ ಆಡಳಿತಮಂಡಳಿ ಸದಸ್ಯರುಗಳಾದ ಶ್ರೀ ಕಲಗೌಡಾ ಜಿ.ಭಬಗೌಡಾ, ಶ್ರೀ ಹುಮಾಯೂನ ದ.ಸನದಿ ಶ್ರೀ ಶಂಕರ ಲ ಧುಮಾಳ ರವರುಗಳು ಪತ್ತಿನ ಮಹಾಮಂಡಳದ ನಿರ್ದೇಶಕರಾದ ಶ್ರೀ ತಮ್ಮಣ್ಣ ಬಾಲಪ್ಪ ಕೆಂಚರಡ್ಡಿರವರಿಗೆ ಕಟ್ಟಡ ದೇಣಿಗೆಯ ಚೆಕ್ಕನ್ನು ನೀಡಿದರು. ಸಂಘದ ಪ್ರಧಾನ ವ್ಯವಸ್ಥಾಪಕ ಪ್ರವೀಣ ಅ.ಚೌಗುಲೆ, ಶಾಖಾ ವ್ಯವಸ್ಥಾಪಕ ಪ್ರವೀಣ ಅ. ಬೋರಗಾಂವ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಪತ್ತಿನ ಸಹಕಾರ ಸಂಘಗಳ ಆಡಳಿತಮಂಡಳಿ ನಿರ್ದೇಶಕರು ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರ



**ಶಿವಮೊಗ್ಗ :** ದಿನಾಂಕ : 22.10.2022ರಂದು ಶಿವಮೊಗ್ಗ ಇಲ್ಲಿ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ವತಿಯಿಂದ ಶಿವಮೊಗ್ಗ ತುಮಕೂರು, ಚಿತ್ರದುರ್ಗ, ಕೋಲಾರ, ಚಿಕ್ಕಾಬಳ್ಳಾಪುರ, ದಾವಣಗೆರೆ, ಜಿಲ್ಲೆಗಳ ವ್ಯಾಪ್ತಿಗೊಳಪಡುವ ಪತ್ತಿನ ಸಹಕಾರ ಸಂಘಗಳ ಆಡಳಿತಮಂಡಳಿ ನಿರ್ದೇಶಕರು ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಶೈಕ್ಷಣಿಕ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಲಾಗಿತ್ತು.

ಪತ್ತಿನ ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡರವರು ಅಧ್ಯಕ್ಷತೆ ವಹಿಸಿದ್ದರು. ಈ ಕಾರ್ಯಾಗಾರದ ಉದ್ಘಾಟನೆಯನ್ನು ಡಿ.ಎಸ್. ಅರುಣ್, ವಿಧಾನ ಪರಿಷತ್ ಸದಸ್ಯರು ಶಿವಮೊಗ್ಗ ಇವರು ನೆರವೇರಿಸಿದರು. ಮುಖ್ಯ ಅತಿಥಿಗಳಾಗಿ ಶ್ರೀ ಕೆ.ಎಲ್.ಜಗದೀಶ್ವರ್, ಅಧ್ಯಕ್ಷರು, ಶಿವಮೊಗ್ಗ ಜಿಲ್ಲಾ ಸಹಕಾರ ಯೂನಿಯನ್, ಶಿವಮೊಗ್ಗ ಶ್ರೀ ಜಿ.ವಾಸುದೇವ, ಸಹಕಾರ ಸಂಘಗಳ ಉಪನಿಬಂಧಕರು, ಶಿವಮೊಗ್ಗ ಹಾಗೂ ಪತ್ತಿನ ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಬಿ.ಡಿ.ಭೂಕಾಂತ, ಶ್ರೀ ವಿ.ರಾಜು ಶ್ರೀ ಜಿ.ಮಲ್ಲಿಕಾರ್ಜುನಯ್ಯ ಶ್ರೀ ಡಿ.ಆರ್.ನಾಗೇಶಪ್ಪ ಹಾಗೂ ಶ್ರೀ ಹೆಚ್.ಟಿ. ನಾಗೇಶ್‌ರವರು ಭಾಗವಹಿಸಿದ್ದರು. ಉಪನಿಬಂಧಕ ಶ್ರೀ ಜಿ.ವಾಸುದೇವ ತರಬೇತಿ ಕುರಿತು ಮಾತನಾಡಿದರು.

ಶ್ರೀ ಜಗದೀಶ ರಾಮ ಇವರಿಂದ ಸಹಕಾರ ಸಂಘಗಳ ಆದಾಯ ಹೆಚ್ಚಿಸುವಲ್ಲಿ ತಂತ್ರಜ್ಞಾನ ಮತ್ತು ವ್ಯಕ್ತಿತ್ವ ವಿಕಸನ ಕುರಿತು ಉಪನ್ಯಾಸ ನೀಡಿದರು. ಶ್ರೀ ಬಿ.ವಿ. ರವೀಂದ್ರನಾಥ್, ಸನ್ನದು ಲೆಕ್ಕಪರಿಶೋಧಕರು, ಸಾಗರ ಇವರಿಂದ "ಸಹಕಾರ ಸಂಘಗಳಿಗೆ ಅನ್ವಯಿಸುವ ತೆರಿಗೆ ಕಾನೂನುಗಳ ಇತ್ತೀಚಿನ ಬದಲಾವಣೆ ಕುರಿತು" ಉಪನ್ಯಾಸ ನೀಡಿದರು. ಸುಮಾರು 200ರಷ್ಟು ಸದಸ್ಯರುಗಳು ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಕಾರ್ಯಾಗಾರದ ಪ್ರಯೋಜನ ಪಡೆದರು.





# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ : 2022–23ನೇ ಸಾಲಿನಿಂದ ಸಹಕಾರಿಗಳಿಗಾಗಿ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯನ್ನು ಸಹಕಾರ ಇಲಾಖೆಯಿಂದ ಮರು ಜಾರಿಗೊಳಿಸುವ ಬಗ್ಗೆ**

**ಉಲ್ಲೇಖ :**

**1. 2022–23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 67 ರಲ್ಲಿನ ಘೋಷಣೆ.**

**2. ಸರ್ಕಾರದ ಆದೇಶ ಸಂಖ್ಯೆ: ಸಿಒ 154 ಸಿಎಲ್‌ಎಸ್ 2022, ಬೆಂಗಳೂರು, ದಿನಾಂಕ : 30.03.2022.**

**3. ಯಶಸ್ವಿನಿ ಸಹಕಾರಿ ಸದಸ್ಯರ ಆರೋಗ್ಯ ರಕ್ಷಣಾ ಟ್ರಸ್ಟ್ ನೋಂದಣಿ ಸಂಖ್ಯೆ: GAN–4–00312–2022–23, ದಿ: 23–09–2022.**

## ಪ್ರಸ್ತಾವನೆ

ಪ್ರಸ್ತಾವನೆ: 2022–23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 67 ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಯಶಸ್ವಿನಿ ಯೋಜನೆಯನ್ನು ರಾಜ್ಯದಲ್ಲಿ ಮರು ಜಾರಿಗೊಳಿಸಲು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (2)ರ ಸರ್ಕಾರದ ಆದೇಶದಲ್ಲಿ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ "ಯಶಸ್ವಿನಿ" ಯೋಜನೆಯನ್ನು ಪರಿಷ್ಕರಿಸಿ ಮರುಜಾರಿಗೊಳಿಸಿ ಅನುಷ್ಠಾನಗೊಳಿಸಲು ಸರ್ಕಾರವು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಈ ಹಿಂದೆ ಸಹಕಾರ ಇಲಾಖೆಯಲ್ಲಿ ಯಶಸ್ವಿನಿ ಯೋಜನೆಯನ್ನು 2003ರಲ್ಲಿ ಪ್ರಾರಂಭಿಸಿದ್ದು, 2003–04 ರಿಂದ 2017–18 ರವರೆಗೆ ಜಾರಿಯಲ್ಲಿದ್ದು ನಂತರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ವರ್ಗಾವಣೆಗೊಂಡಿದ್ದು, ದಿ: 31.05.2018 ರಿಂದ ಈ ಯೋಜನೆಯು ಸ್ಥಗಿತಗೊಂಡಿದ್ದು, ದಿನಾಂಕ : 01.06.2018 ರಿಂದ ಆರೋಗ್ಯ ಕರ್ನಾಟಕ ಯೋಜನೆಯೊಂದಿಗೆ ವಿಲೀನಗೊಂಡಿರುತ್ತದೆ.

ರಾಜ್ಯದೆಲ್ಲೆಡೆ ಸಹಕಾರಿಗಳ ಮತ್ತು ರೈತರ ನಿರಂತರ ಬೇಡಿಕೆಯಂತೆ ರಾಜ್ಯ ಸರ್ಕಾರವು 2022–23ನೇ ಸಾಲಿನ ಆಯವ್ಯಯದಲ್ಲಿ ಯಶಸ್ವಿನಿ ಯೋಜನೆಯನ್ನು ಪರಿಣಾಮಕಾರಿಯಾಗಿ ರೂಪಿಸಿ ಮರುಜಾರಿಗೊಳಿಸಲು ತೀರ್ಮಾನಿಸಿ ರೂ. 300/– ಕೋಟಿ ಆಯವ್ಯಯದ ಅವಕಾಶ ಕಲ್ಪಿಸಿ ಯೋಜನೆಯನ್ನು ಘೋಷಿಸಿದೆ.

ಯಶಸ್ವಿನಿ ಯೋಜನೆಯು ಸಹಕಾರ ಸಂಘಗಳ ಸದಸ್ಯರ ಅನುಕೂಲಕ್ಕಾಗಿ ಜಾರಿಗೊಂಡಿರುವ ಯೋಜನೆಯಾಗಿದ್ದು, ಇದನ್ನು ಸಹಕಾರ ಇಲಾಖೆಯಿಂದ ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 154 ಸಿಎಲ್‌ಎಸ್ 2022, ಬೆಂಗಳೂರು, ದಿನಾಂಕ : 12.10.2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2022–23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 67 ರಲ್ಲಿ ಘೋಷಿಸಿರುವಂತೆ ಯಶಸ್ವಿನಿ ಯೋಜನೆಯನ್ನು ಪರಿಷ್ಕರಿಸಿ, ಸಹಕಾರ ಇಲಾಖೆಯಿಂದ ಮರುಜಾರಿಗೊಳಿಸಿ ಆದೇಶಿಸಿದೆ.

ಈ ಯೋಜನೆಯನ್ನು ಓದಲಾದ ಕ್ರ.ಸಂ. (3)ರಲ್ಲಿ ಈ ಉದ್ದೇಶಕ್ಕಾಗಿ ನೋಂದಣಿಯಾಗಿರುವ "ಯಶಸ್ವಿನಿ ಸಹಕಾರಿ ಸದಸ್ಯರ ಆರೋಗ್ಯ ರಕ್ಷಣಾ ಟ್ರಸ್ಟ್" ಮೂಲಕ ಅನುಷ್ಠಾನಗೊಳಿಸಲಾಗುವುದು. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ ಇವರು ಟ್ರಸ್ಟಿನ ಅಧ್ಯಕ್ಷರಾಗಿರುತ್ತಾರೆ.

2022–23ನೇ ಸಾಲಿಗೆ ಸಂಬಂಧಿಸಿದಂತೆ ಯಶಸ್ವಿನಿ ಯೋಜನೆಯಡಿ ಸದಸ್ಯತ್ವ ನೋಂದಣಿ ಪ್ರಕ್ರಿಯೆಯನ್ನು ದಿನಾಂಕ: 01–11–2022 ರಿಂದ ಪ್ರಾರಂಭಿಸಲಾಗುವುದು. ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದ ಮಾರ್ಗಸೂಚಿಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗಿದೆ.

ಮಾನ್ಯ ಮುಖ್ಯಮಂತ್ರಿಯವರು ದಿನಾಂಕ: 03.10.2022 ರಂದು ಅನುಮೋದಿಸಿರುವಂತೆ ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಸಹಿ/–

**ಎ.ಸಿ. ದಿವಾಕರ್**

ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ

ಸರ್ಕಾರದ ಜಂಟಿ ಕಾರ್ಯದರ್ಶಿ

ಸಹಕಾರ ಇಲಾಖೆ.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ : 2022–23ನೇ ಸಾಲಿಗೆ ಸಹಕಾರಿಗಳಿಗಾಗಿ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯನ್ನು ಜಾರಿಗೊಳಿಸಲು ಹಾಗೂ ಹೊಸ ಸದಸ್ಯರನ್ನು ನೋಂದಾಯಿಸುವ ಬಗ್ಗೆ.**

**ಉಲ್ಲೇಖ : 1. 2022–23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 67ರಲ್ಲಿನ ಘೋಷಣೆ.**

**2. ಸರ್ಕಾರದ ಆದೇಶ ಸಂಖ್ಯೆ: ಸಿಒ 154 ಸಿಎಲ್ಎಸ್ 2022, ಬೆಂಗಳೂರು, ದಿನಾಂಕ : 30.03.2022.**

**3. ಸರ್ಕಾರದ ಆದೇಶ ಸಂಖ್ಯೆ: ಸಿಒ 154 ಸಿಎಲ್ಎಸ್ 2022, ಬೆಂಗಳೂರು, ದಿನಾಂಕ : 12.10.2022.**

## ಪ್ರಸ್ತಾವನೆ

2022–23ನೇ. ಸಾಲಿನ ಆಯವ್ಯಯ ಭಾಷಣದ ಕಂಡಿಕೆ 97 ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಯಶಸ್ವಿನಿ ಯೋಜನೆಯನ್ನು ರಾಜ್ಯದಲ್ಲಿ ಮರು ಜಾರಿಗೊಳಿಸಲು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (2)ರ ಸರ್ಕಾರದ ಆದೇಶದಲ್ಲಿ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ "ಯಶಸ್ವಿನಿ" ಯೋಜನೆಯನ್ನು ಪರಿಷ್ಕರಿಸಿ ಮರು ಜಾರಿಗೊಳಿಸಿ ಅನುಷ್ಠಾನಗೊಳಿಸಲು ಸರ್ಕಾರವು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಈ ಹಿಂದೆ ಸಹಕಾರ ಇಲಾಖೆಯಲ್ಲಿ ಯಶಸ್ವಿನಿ ಯೋಜನೆಯನ್ನು 2003ರಲ್ಲಿ ಪ್ರಾರಂಭಿಸಿದ್ದು, 2003–04 ರಿಂದ 2017–18 ರವರೆಗೆ ಜಾರಿಯಲ್ಲಿದ್ದು ನಂತರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ವರ್ಗಾವಣೆಗೊಂಡಿದ್ದು, ದಿನಾಂಕ: 31–05–2018 ರಿಂದ ಈ ಯೋಜನೆಯು ಸ್ಥಗಿತಗೊಂಡಿದ್ದು, ದಿನಾಂಕ : 01–06–2018 ರಿಂದ ಆರೋಗ್ಯ ಕರ್ನಾಟಕ ಯೋಜನೆಯೊಂದಿಗೆ ವಿಲೀನಗೊಂಡಿರುತ್ತದೆ.

ರಾಜ್ಯದೆಲ್ಲೆಡೆ ಸಹಕಾರಿಗಳ ಮತ್ತು ರೈತರ ನಿರಂತರ ಬೇಡಿಕೆಯಂತೆ ರಾಜ್ಯ ಸರ್ಕಾರವು 2022–23ನೇ ಸಾಲಿನ ಆಯವ್ಯಯದಲ್ಲಿ ಯಶಸ್ವಿನಿ ಯೋಜನೆಯನ್ನು ಪರಿಣಾಮಕಾರಿಯಾಗಿ ರೂಪಿಸಿ ಮರುಜಾರಿಗೊಳಿಸಲು ತೀರ್ಮಾನಿಸಿ ರೂ.300/– ಕೋಟಿಗಳ ಅವಕಾಶ ಕಲ್ಪಿಸಿ ಆಯವ್ಯಯದಲ್ಲಿ ಈ ಯೋಜನೆಯನ್ನು ಘೋಷಿಸಿದೆ.

ಮೇಲೆ ಓದಲಾದ ಕ್ರ.ಸಂ. (3)ರ ಆದೇಶದಲ್ಲಿ ಪರಿಷ್ಕೃತ ಯಶಸ್ವಿನಿ ಯೋಜನೆಯನ್ನು ಸಹಕಾರ ಇಲಾಖೆಯಿಂದ ಅನುಷ್ಠಾನಗೊಳಿಸಲು ಆದೇಶಿಸಿದೆ.

ಯಶಸ್ವಿನಿ ಯೋಜನೆಯು ಸಹಕಾರ ಸಂಘಗಳ ಸದಸ್ಯರ ಅನುಕೂಲಕ್ಕಾಗಿ ಜಾರಿಗೊಂಡಿರುವ ಒಂದು ವಿಶೇಷ ಯೋಜನೆಯಾಗಿದ್ದು, ಇದರಲ್ಲಿ ಫಲಾನುಭವಿ ಕುಟುಂಬಕ್ಕೆ ವಾರ್ಷಿಕ ವೈದ್ಯಕೀಯ ಚಿಕಿತ್ಸಾ ವೆಚ್ಚದ ಗರಿಷ್ಠ ಮಿತಿ ರೂ.5.00 ಲಕ್ಷಕ್ಕೆ ನಿಗಧಿಪಡಿಸಿದೆ. ರಾಜ್ಯದ ಯಾವುದೇ ಯಶಸ್ವಿನಿ ನೆಟ್‌ವರ್ಕ್ ಆಸ್ಪತ್ರೆಯಲ್ಲಿ ನಗದು ರಹಿತ ಚಿಕಿತ್ಸೆ ಪಡೆಯಲು ಅವಕಾಶ ಇರುತ್ತದೆ.

ಪರಿಷ್ಕೃತ ಯಶಸ್ವಿನಿ ಯೋಜನೆಯನ್ನು ಜಾರಿಗೊಳಿಸಲು ಅನುವಾಗುವಂತೆ ಸದಸ್ಯರ ನೋಂದಣಿಯನ್ನು ದಿ: 01.11.2022 ರಿಂದ ಪ್ರಾರಂಭಿಸಲಿದ್ದು, ಯೋಜನೆಯ ಮಾರ್ಗಸೂಚಿಗಳನ್ನು ಹೊರಡಿಸಬೇಕಾಗಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಒ 154(1) ಸಿಎಲ್ಎಸ್ 2022, ದಿನಾಂಕ: 12.10.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2022–23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 67 ರಲ್ಲಿ ಘೋಷಿಸಿರುವಂತೆ ಯಶಸ್ವಿನಿ ಯೋಜನೆಯನ್ನು ಪರಿಷ್ಕರಿಸಿ ಮರುಜಾರಿಗೊಳಿಸಿ ಅನುಷ್ಠಾನಗೊಳಿಸಲು ಈ ಕೆಳಕಂಡ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

## ಮಾರ್ಗಸೂಚಿಗಳು:

1. ಕರ್ನಾಟಕ ಸಹಕಾರ ಸಂಘಗಳ ಕಾಯ್ದು 1959ರಡಿ ಅಥವಾ ಕರ್ನಾಟಕ ಸೌಹಾರ್ದ ಸಹಕಾರಿಗಳ ಕಾಯ್ದೆ 1997 ರಡಿ ಅಥವಾ ಬಹು ರಾಜ್ಯ ಸಹಕಾರಿ ಸಂಘಗಳ ಕಾಯ್ದೆ 2002ರಡಿ ನೋಂದಾಯಿಸಿ, ಕಾರ್ಯನಿರ್ವಹಿಸುತ್ತಿರುವ ಯಾವುದೇ ಸಹಕಾರ ಸಂಘದ ಸದಸ್ಯರು ಮತ್ತು ಅವರ ಕುಟುಂಬ ವರ್ಗದವರಿಗೆ ಯಶಸ್ವಿನಿ ಯೋಜನೆಯು ಅನ್ವಯಿಸುತ್ತದೆ.
2. ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ವತಿಯಿಂದ ಸಂಘಟಿಸಲ್ಪಟ್ಟಿರುವ ಎಲ್ಲಾ ಗ್ರಾಮೀಣ ಸ್ವ–ಸಹಾಯ ಗುಂಪುಗಳ ಸದಸ್ಯರು ಹಾಗೂ ಅವರ ಕುಟುಂಬ ವರ್ಗದವರಿಗೂ ಈ ಯೋಜನೆ ಅನ್ವಯಿಸುತ್ತದೆ.
3. ರಾಜ್ಯದ ಯಾವುದೇ ಸಹಕಾರ ಸಂಘ/ಗ್ರಾಮೀಣ ಸ್ವ–ಸಹಾಯ ಗುಂಪಿನಲ್ಲಿ ಕುಟುಂಬದ ಒಬ್ಬ ವ್ಯಕ್ತಿ ಸದಸ್ಯನಾಗಿ ಮೂರು ತಿಂಗಳು ಗತಿಸಿದ್ದಲ್ಲಿ ಅವರ ಕುಟುಂಬವನ್ನು ಒಂದು ಘಟಕವನ್ನಾಗಿ ಪರಿಗಣಿಸಿ ವಾರ್ಷಿಕ ವಂತಿಗೆ ಪಾವತಿಸಿ ಯಶಸ್ವಿನಿ ಯೋಜನೆ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. ಕುಟುಂಬ ಎಂದರೆ ಪ್ರಧಾನ ಅರ್ಜಿದಾರರ (Principal Member) ತಂದೆ, ತಾಯಿ, ಗಂಡ/ಹೆಂಡತಿ,

ಗಂಡು ಮಕ್ಕಳು, ಮದುವೆಯಾಗದ ಹೆಣ್ಣು ಮಕ್ಕಳು, ಸೊಸೆಯಂದಿರು ಮತ್ತು ಮೊಮ್ಮಕ್ಕಳು ಎಂದು ಅರ್ಥೈಯಿಸುವುದು.

4. 2022–23ನೇ ಸಾಲಿಗೆ ಈ ಯೋಜನೆಯಡಿ

(ಎ) ಗ್ರಾಮೀಣ ಸಹಕಾರ ಸಂಘಗಳ/ಸ್ವ–ಸಹಾಯ ಗುಂಪುಗಳ ಗರಿಷ್ಠ ನಾಲ್ಕು ಸದಸ್ಯರ ಕುಟುಂಬ ಒಂದಕ್ಕೆ ವಾರ್ಷಿಕ, ರೂ.500/–ಗಳ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೆ ಶೇ.20 ರಷ್ಟು ಹೆಚ್ಚುವರಿಯಾಗಿ ಅಂದರೆ ಪ್ರತಿ ಹೆಚ್ಚುವರಿ ಸದಸ್ಯರಿಗೆ ರೂ.100/–ಗಳನ್ನು ಪಾವತಿಸತಕ್ಕದ್ದು.

(ಬಿ) ನಗರ ಸಹಕಾರ ಸಂಘಗಳ ಗರಿಷ್ಠ ನಾಲ್ಕು ಸದಸ್ಯರ ಕುಟುಂಬ ಒಂದಕ್ಕೆ ವಾರ್ಷಿಕ. ರೂ. 1000/–ಗಳ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೆ ಶೇ.20 ರಷ್ಟು ಹೆಚ್ಚುವರಿಯಾಗಿ ಅಂದರೆ ಪ್ರತಿ ಹೆಚ್ಚುವರಿ ಸದಸ್ಯರಿಗೆ ರೂ.200/–ಗಳನ್ನು ಪಾವತಿಸತಕ್ಕದ್ದು.

(ಸಿ) ಪರಿಶಿಷ್ಠ ಜಾತಿ/ಪರಿಶಿಷ್ಟ ಪಂಗಡದ ಸದಸ್ಯರಿಗೆ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ್ಪ ಯೋಜನೆಯಡಿ ಸಹಾಯಧನ ನೀಡುವ ಮೂಲಕ ಅವರ ವಾರ್ಷಿಕ ಸದಸ್ಯತ್ವದ ವಂತಿಗೆಯನ್ನು ಸರ್ಕಾರವೇ ಭರಿಸುತ್ತದೆ.

(ಡಿ) ಸಹಕಾರಿ ಮೀನುಗಾರರು, ಸಹಕಾರಿ ಬೀಡಿ ಕಾರ್ಮಿಕರು ಮತ್ತು ಸಹಕಾರಿ ನೇಕಾರರು ಕೂಡ ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

(ಇ) ಸದಸ್ಯರ/ಕುಟುಂಬದವರಿಂದ ಸಂಗ್ರಹಿಸಿದ ವಂತಿಗೆ ಪೈಕಿ ಪ್ರತಿ ಕುಟುಂಬದ ಕಾರ್ಡಿಗೆ ರೂ.10/–ಗಳನ್ನು ಸಹಕಾರ ಸಂಘದ ಸಾದಿಲ್ವಾರು ವೆಚ್ಚಕ್ಕೆ ಮತ್ತು ಯಶಸ್ವಿನಿ ಸದಸ್ಯರನ್ನು ನೋಂದಾಯಿಸಲು ಶ್ರಮಿಸಿದವರಿಗೆ ಪ್ರೋತ್ಸಾಹಧನವಾಗಿ ಸಹಕಾರ ಸಂಘ/ಸಂಸ್ಥೆಯು ಇಟ್ಟುಕೊಂಡು, ಉಳಿದ ಮೊತ್ತವನ್ನು ಹಣ ಸ್ವೀಕರಿಸಿದ 15 ದಿನಗಳೊಳಗಾಗಿ ಸಂಬಂಧಿಸಿದ ಜಿಲ್ಲಾ ಸಹಕಾರಿ ಬ್ಯಾಂಕುಗಳಲ್ಲಿ ಯಶಸ್ವಿನಿ ಟ್ರಸ್ಟ್ ಹೊಂದಿರುವ ಖಾತೆಗೆ ಜಮಾ ಮಾಡತಕ್ಕದ್ದು/ವರ್ಗಾಯಿಸತಕ್ಕದ್ದು. ಜಿಲ್ಲಾ ಸಹಕಾರಿ ಬ್ಯಾಂಕುಗಳು ಜಮಾ ಆಗುವ ವಂತಿಗೆಯ ಮೊತ್ತವನ್ನು ಸ್ವೀಕರಿಸಿದ 7 ದಿನಗಳೊಳಗಾಗಿ ಅಪೆಕ್ಸ್ ಬ್ಯಾಂಕಿನಲ್ಲಿರುವ ಯಶಸ್ವಿನಿ ಟ್ರಸ್ಟ್ ಖಾತೆಗೆ ಜಮಾ ಮಾಡತಕ್ಕದ್ದು/ವರ್ಗಾಯಿಸತಕ್ಕದ್ದು. ವಿಳಂಬವಾದಲ್ಲಿ ಆ ಹಣವನ್ನು ಇಟ್ಟುಕೊಂಡ ಸಹಕಾರಿ ಸಂಘ/ಸಂಸ್ಥೆಯವರು ಬ್ಯಾಂಕಿನ ನಿಯಮಗಳ ಪ್ರಕಾರ ವಿಳಂಬದ ಅವಧಿಗೆ ಬಡ್ಡಿ ಪಾವತಿ ಮಾಡಲು ಬದ್ಧರಾಗುತ್ತಾರೆ.

5. ಮದುವೆಯಾಗಿರುವ ಹೆಣ್ಣು ಮಗಳು ಹಾಗೂ ಅವಳ ಮಕ್ಕಳು ತಂದೆ/ತಾಯಿ/ಅಣ್ಣ/ತಮ್ಮ ಕುಟುಂಬದಲ್ಲಿಯೇ ಅಂದರೆ ಪ್ರಧಾನ ಅರ್ಜಿದಾರರ ಕುಟುಂಬದಲ್ಲಿಯೇ ಯಾವುದೇ ಕಾರಣಕ್ಕೆ ವಾಸವಾಗಿದ್ದರೆ ಅವರ ಪಾಲಿನ ವಂತಿಗೆ ಹಣ ಪಾವತಿಸಿದ್ದರೆ ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. ಆದಾಗ್ಯೂ 2022–23ನೇ ಸಾಲಿನ ಯೋಜನೆಯ ಅವಧಿಯಲ್ಲಿ ಮದುವೆಯಾದ ಹೆಣ್ಣು ಮಗಳು ತಂದೆ/ತಾಯಿ/ಅಣ್ಣ/ತಮ್ಮ ಇವರ ಜೊತೆ ವಾಸವಾಗಿರದೇ ಸಂಘದ ಕಾರ್ಯವ್ಯಾಪ್ತಿ ಹೊರಗೆ ವಾಸವಿದ್ದರೆ ಅಂತಹ ಸಂದರ್ಭದಲ್ಲಿ ಈ ಯೋಜನೆ ಸೌಲಭ್ಯವನ್ನು ಪಡೆಯಲು ಅರ್ಹರಾಗಿರುವುದಿಲ್ಲ. ಆದರೆ, ಅವಳೇ ಸಹಕಾರ ಸಂಘದ ಸದಸ್ಯೆಯಾಗಿ ಮೂರು ತಿಂಗಳು ಕಳೆದಿದ್ದಲ್ಲಿ ಯಶಸ್ವಿನಿ ಯೋಜನೆಯ ಸೌಲಭ್ಯ ಪಡೆಯಬಹುದಾಗಿದೆ.

6. 2022–23ನೇ ಸಾಲಿನಲ್ಲಿ ಮದುವೆಯಾಗದ ಹೆಣ್ಣುಮಕ್ಕಳಿಗೆ ಪ್ರಧಾನ ಅರ್ಜಿದಾರರು ವಂತಿಗೆ ಪಾವತಿಸಿದ್ದು, ಆನಂತರ ಮದುವೆಯಾಗಿದ್ದಲ್ಲಿ ಅಂತಹ ಮದುವೆಯಾದ ಹೆಣ್ಣು ಮಗಳು ಪ್ರಸಕ್ತ ಸಾಲಿನಲ್ಲಿ ಯಶಸ್ವಿನಿ ಯೋಜನೆಯಡಿಯಲ್ಲಿ ಚಿಕಿತ್ಸೆ ಪಡೆಯಲು ಅರ್ಹರಿರುತ್ತಾರೆ.

7. ಯಶಸ್ವಿನಿ ಯೋಜನೆಯಡಿ ಈ ಮೇಲೆ ಹೇಳಿರುವ ಅರ್ಹತೆಯುಳ್ಳ ವ್ಯಕ್ತಿಗಳು ಸದಸ್ಯರಾಗಲು ಯಾವುದೇ ವಯೋಮಿತಿ ನಿರ್ಬಂಧವಿರುವುದಿಲ್ಲ.

8. ನವಜಾತ ಶಿಶುವಿನ ತಾಯಿ ಹೆಸರು ಯಶಸ್ವಿನಿ ಕಾರ್ಡ್‌ನಲ್ಲಿದ್ದರೆ 30 ದಿನಗಳವರೆಗೆ ತಾಯಿ ಹೆಸರು ಇರುವ ಯಶಸ್ವಿನಿ ಕಾರ್ಡಿನ ಆಧಾರದ ಮೇಲೆ ಈ ಯೋಜನೆಯಡಿಯಲ್ಲಿ ಬರುವ ಸೌಲಭ್ಯವನ್ನು ನವಜಾತ ಶಿಶು ಪಡೆಯಬಹುದು.

9. ಸಮಾಪನಗೊಂಡ ಅಥವಾ ನಿಷ್ಕ್ರಿಯಗೊಂಡ ಸಹಕಾರ ಸಂಘಗಳ ಸದಸ್ಯರು ಮತ್ತು ನೌಕರರ ಸಹಕಾರ ಸಂಘಗಳ ಸದಸ್ಯರಿಗೆ ಈ ಯೋಜನೆ ಅನ್ವಯಿಸುವುದಿಲ್ಲ.

10. ಪ್ರಧಾನ ಅರ್ಜಿದಾರರು ಮತ್ತು ಅವನ ಕುಟುಂಬದ ಯಾವುದೇ ಸದಸ್ಯನು ಸರ್ಕಾರಿ ನೌಕರರಾಗಿ ಅಥವಾ ಖಾಸಗಿ ಕಂಪನಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ವೇತನ ಪಡೆಯುತ್ತಿದ್ದಲ್ಲಿ ಈ ಯೋಜನೆಗೆ ಅರ್ಹರಿರುವುದಿಲ್ಲ. ಪ್ರಧಾನ ಅರ್ಜಿದಾರರು ಅಥವಾ ಅವನ ಕುಟುಂಬದ ಸದಸ್ಯರು ಯಾವುದೇ ವಿಮಾ ಯೋಜನೆಯಡಿಯಲ್ಲಿ ಸದಸ್ಯನಾಗಿದ್ದಲ್ಲಿ ಅಂತಹವರು ಯಶಸ್ವಿನಿ ಯೋಜನೆಯಡಿ ಸದಸ್ಯನಾಗಲು ಅರ್ಹನಿರುವುದಿಲ್ಲ.

11. 2022–23ನೇ ಸಾಲಿಗೆ ನೋಂದಣಿ ಪ್ರಕ್ರಿಯೆಯನ್ನು ದಿ: 01.11.2022 ರಿಂದ ಪ್ರಾರಂಭಿಸಲಾಗುವುದು.

12. 2022–23ನೇ ಯಶಸ್ವಿನಿ ಯೋಜನೆಯ ಅವಧಿ ದಿನಾಂಕ: 01–01–2023 ರಿಂದ ದಿ: 31–12.2023 ರವರೆಗೆ ಜಾರಿಯಲ್ಲಿರುತ್ತದೆ.

13. ಯಶಸ್ವಿನಿ ಯೋಜನೆಯಡಿ ಸದಸ್ಯರಿಗೆ ಯೂನಿಕ್ ಐಡಿ ಸಂಖ್ಯೆಯುಳ್ಳ ಕಾರ್ಡ್‌ನ್ನು ಒದಗಿಸಲಾಗುವುದು. ಸದರಿ ಕಾರ್ಡಿನಲ್ಲಿ ಪ್ರಾಥಮಿಕ ಸದಸ್ಯರ ಸಹಕಾರ ಸಂಘದ ಸದಸ್ಯತ್ವದ ವಿವರಗಳು ಮತ್ತು ಅವರ ಕುಟುಂಬ ಸದಸ್ಯರ ವಿವರಗಳು, ವಾರ್ಷಿಕ ವಂತಿಗೆ ಪಾವತಿಸಿರುವ ವಿವರ ಹಾಗೂ ಭಾವಚಿತ್ರದ ವಿವರಗಳ ಮಾಹಿತಿಯು ಸಂಗ್ರಹಣೆ ಆಗಿರುತ್ತದೆ. ಇದರಲ್ಲಿ ಕುಟುಂಬದ ವಾರ್ಷಿಕ ವೈದ್ಯಕೀಯ ವೆಚ್ಚದ ಮಿತಿಯನ್ನು ಸಹ ಕಾರ್ಡಿನಲ್ಲಿ ನಮೂದಿಸಲಾಗಿರುತ್ತದೆ.

14. ಸದರಿ ಕಾರ್ಡ್‌ನ್ನು ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಹಾಗೂ ಟಿಪಿಎ ಸಂಸ್ಥೆಯಲ್ಲಿ ಉಪಯೋಗಿಸಿದಾಗ ಪ್ರಧಾನ ಅರ್ಜಿದಾರರು ಹಾಗೂ ಅವರ ಅವಲಂಬಿತರ ಸಂಪೂರ್ಣ ಮಾಹಿತಿ ಲಭ್ಯವಾಗುವ ರೀತಿಯಲ್ಲಿ ತಂತ್ರಜ್ಞಾನ ಅಳವಡಿಸಿಕೊಳ್ಳಲಾಗುವುದು.

15. ಯಶಸ್ವಿನಿ ಯೋಜನೆಯಡಿ ನೋಂದಾಯಿತ ಸದಸ್ಯರು ಈ ಕಾರ್ಡ್‌ನ್ನು ಬಳಸಿ ನಗದು ರಹಿತ ಚಿಕಿತ್ಸೆಗಳನ್ನು ಪಡೆಯಬಹುದಾಗಿದೆ.

16. ಈ ಕೆಳಕಂಡ ಸೌಲಭ್ಯಗಳನ್ನು ಯಶಸ್ವಿನಿ ಸದಸ್ಯರಿಗೆ ಒದಗಿಸಲಾಗುವುದು.

ಎ) ಯಶಸ್ವಿನಿ ಯೋಜನೆಯಡಿಯಲ್ಲಿ ಮುಖ್ಯವಾಗಿ ಹೃದಯಕ್ಕೆ ಸಂಬಂಧಿಸಿದ ರೋಗಗಳು, ಕಿವಿ, ಮೂಗು, ಗಂಟಲು ವ್ಯಾದಿಗಳು, ಕರುಳಿನ ಖಾಯಿಲೆಗಳು, ನರಗಳಿಗೆ ಸಂಬಂಧಿಸಿದ ಖಾಯಿಲೆಗಳು, ಕಣ್ಣಿನ ಖಾಯಿಲೆಗಳು, ಮೂಳೆ ರೋಗಗಳು, ಸ್ತ್ರೀಯರಿಗೆ ಸಂಬಂಧಿಸಿದ ಖಾಯಿಲೆಗಳು ಹಾಗೂ ಈ ಯೋಜನೆಯಡಿ ಇತರೆ ಅನುಸೂಚಿತ ಸಾಮಾನ್ಯ ರೋಗಿಗಳಿಗೆ ಸಂಬಂಧಿಸಿದ ಚಿಕಿತ್ಸಾ ಸೌಲಭ್ಯಗಳನ್ನು ರಾಜ್ಯದ ಯಶಸ್ವಿನಿ ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಒದಗಿಸಲಾಗುವುದು.

ಬಿ) ಪ್ರಾರಂಭಿಕವಾಗಿ ಈ ಹಿಂದಿನ ಯಶಸ್ವಿನಿ ಯೋಜನೆಯಲ್ಲಿ ನೋಂದಾಯಿಸಿದ ನೆಟ್‌ವರ್ಕ್ ಆಸ್ಪತ್ರೆಗಳನ್ನೇ ಸದ್ಯಕ್ಕೆ ಮುಂದುವರಿಸಲಾಗಿದೆ. ನಂತರ ಹೊಸ ಮಾರ್ಗಸೂಚಿಗಳಂತೆ, ಟ್ರಸ್ಟ್‌ನಲ್ಲಿ ತೀರ್ಮಾನಿಸಿ ನೆಟ್‌ವರ್ಕ್ ಆಸ್ಪತ್ರೆಗಳನ್ನು ಅಂತಿಮಗೊಳಿಸಲಾಗುವುದು.

ಸಿ) ಪ್ರಾರಂಭಿಕವಾಗಿ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಲ್ಲಿ ಅಳವಡಿಸಿಕೊಂಡಿರುವ 1650 ಖಾಯಿಲೆಗಳಿಗೆ ಚಿಕಿತ್ಸೆಗಳನ್ನು ಯಶಸ್ವಿನಿ ಯೋಜನೆಗೆ ಅಳವಡಿಸಿಕೊಳ್ಳಲಾಗುವುದು. ಮುಂದೆ ಯಶಸ್ವಿನಿ ಟ್ರಸ್ಟ್‌ನಲ್ಲಿ ಚರ್ಚಿಸಿ ಅಗತ್ಯತೆ ಕಂಡುಬಂದಲ್ಲಿ ಚಿಕಿತ್ಸೆಗಳು ಮತ್ತು ದರಗಳ ಪರಿಷ್ಕರಣೆಗೆ ಕ್ರಮವಿಡಲಾಗುವುದು.

ಡಿ) ಯಶಸ್ವಿನಿ ಸದಸ್ಯರು ಜನರಲ್ ವಾರ್ಡ್‌ನಲ್ಲಿ ಸೌಲಭ್ಯ ಪಡೆಯುವಲ್ಲಿ ಅರ್ಹತೆ ಹೊಂದಿರುತ್ತಾರೆ. ಯಶಸ್ವಿನಿ ಯೋಜನೆಯಡಿ ನೆಟ್‌ವರ್ಕ್ ಆಸ್ಪತ್ರೆಯಲ್ಲಿ ಒದಗಿಸಿರುವ ಚಿಕಿತ್ಸಾ ಸೌಲಭ್ಯದಲ್ಲಿ ಔಷಧಿ ವೆಚ್ಚ, ಆಸ್ಪತ್ರೆ ವೆಚ್ಚ, ಶಸ್ತ್ರಚಿಕಿತ್ಸೆಯ ವೆಚ್ಚ, ಆಪರೇಶನ್ ಥಿಯೇಟರ್ ಬಾಡಿಗೆ, ಅರೆವಳಿಕೆ ತಜ್ಞರ ಫೀ, ಸರ್ಜನ್ ಫೀ, ಕನ್ಸಲ್ಟೆಂಟ್ ಫೀ, ಬೆಡ್ ಚಾರ್ಜ್, ನರ್ಸ್ ಫೀ ಇತ್ಯಾದಿ ವೆಚ್ಚ ಒಳಗೊಂಡಿರುತ್ತದೆ.

ಇ) ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಯಶಸ್ವಿನಿ ಸದಸ್ಯರಿಗೆ ಹೊರ ರೋಗಿ ಚಿಕಿತ್ಸೆಗೆ (ಓಪಿಡಿ) ಗರಿಷ್ಠ ರೂ.200/–ಗಳ (ಮೂರು ತಿಂಗಳ ಅವಧಿಗೆ) ಮಿತಿ ನಿಗಧಿಪಡಿಸಿದ್ದು, ನೆಟ್‌ವರ್ಕ್ ಆಸ್ಪತ್ರೆಗಳು ಇದಕ್ಕಿಂತ ಹೆಚ್ಚಿನ ಶುಲ್ಕವನ್ನು ಸದಸ್ಯರಿಗೆ ವಿಧಿಸತಕ್ಕದಲ್ಲ. ಈ ಪೈಕಿ ರೂ.200/– ಗಳನ್ನು ಯಶಸ್ವಿನಿ ಟ್ರಸ್ಟ್‌ನ ವತಿಯಿಂದ ಪಾವತಿಸಲಾಗುವುದು.

ಎಫ್) ಸದಸ್ಯರು ಯಶಸ್ವಿನಿ ಕಾರ್ಡ್ ಪಡೆದ ಹದಿನೈದು (15) ದಿನಗಳ ನಂತರ ಯಶಸ್ವಿನಿ ಕಾರ್ಡುದಾರರು ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಅರ್ಹರಾಗಿರುತ್ತಾರೆ.

17. ಸದಸ್ಯರ ನೋಂದಣಿಗೆ ಮಾರ್ಗಸೂಚಿಗಳು, ಯಶಸ್ವಿನಿ ನೆಟ್‌ವರ್ಕ್ ಆಸ್ಪತ್ರೆಗಳ ಯಾದಿ, ಶಸ್ತ್ರಚಿಕಿತ್ಸೆಗಳ ಯಾದಿ, ಇವುಗಳನ್ನು ಸಹಕಾರ ಇಲಾಖೆಯ ಸಹಕಾರ ಸಿಂಧು ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗುವುದು.

18. ಸದಸ್ಯರು ಕಡ್ಡಾಯವಾಗಿ ತಮ್ಮ ಮೊಬೈಲ್ ಸಂಖ್ಯೆಯನ್ನು ಒದಗಿಸತಕ್ಕದು.

ಮಾನ್ಯ ಮುಖ್ಯಮಂತ್ರಿಯವರು ದಿನಾಂಕ: 03–10–2022 ರಂದು ಅನುಮೋದಿಸಿರುವಂತೆ ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಸಹಿ/–

**ಎ.ಸಿ. ದಿವಾಕರ್**

ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ

ಸರ್ಕಾರದ ಜಂಟಿ ಕಾರ್ಯದರ್ಶಿ

ಸಹಕಾರ ಇಲಾಖೆ.

# ಯಶವಂತಪುರ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ಲಿ., ಬೆಂಗಳೂರು






**ಶ್ರೀ ಮುನಿಸ್ವಾಮಿ**
ಅಧ್ಯಕ್ಷರು



**ಶ್ರೀ ಎಂ.ಜೆ. ನರೇಂದ್ರ ಕುಮಾರ**
ನಿರ್ದೇಶಕರು

ಯಶವಂತಪುರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಸಂಘವು ಸಮುದಾಯಕ್ಕಾಗಿ ಕೆಲಸ ಮಾಡುವ ಆರ್ಥಿಕ ಅಥವಾ ಸಾಮಾಜಿಕ ಯಶಸ್ಸನ್ನು ಬಯಸುವ ವ್ಯಾಪಾರ ಸಂಸ್ಥೆಗಳ ಸಂಘವಾಗಿದೆ. ಸಹಕಾರ ಸಂಘದ ಅಭ್ಯುದಯಕ್ಕಾಗಿ ದಿ॥ಎಸ್.ಎಂ.ವೇಣುಗೋಪಾಲ್ ಹಾಗು ದಿ॥ಸಿ.ಕೃಷ್ಣಮೂರ್ತಿ ಇವರ ಅಧ್ಯಕ್ಷತೆಯಲ್ಲಿ "ಯಶವಂತಪುರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ"ಯು ದಿನಾಂಕ : 31–12–1974 ರಂದು ಸ್ಥಾಪನೆಗೊಂಡಿತು.

ಪ್ರಸ್ತುತ ಸಂಘವು 4504 ಸದಸ್ಯರನ್ನು ಹಾಗೂ 202 ಸಹಸದಸ್ಯರನ್ನು ಹೊಂದಿದ್ದು, ದಿನಾಂಕ : 31–03–2022ಕ್ಕೆ ರೂ.5,49,13,600–00 ಷೇರು ಬಂಡವಾಳವನ್ನು ಹೊಂದಿದೆ. ಈ ಸಹಕಾರ ಸಂಘವು 48 ವರ್ಷಗಳ ಸಾರ್ಥಕ ಸೇವೆಯನ್ನು ಪೂರೈಸಿ ದಿನಾಂಕ : 26–09–1999 ರಂದು ಬೆಳ್ಳಿ ಹಬ್ಬವನ್ನು ಅದ್ದೂರಿಯಾಗಿ ಆಚರಿಸಿಕೊಂಡಿದೆ. ಸಂಘವು ಸುಸಜ್ಜಿತ ಮೂರುನೂತನ ಸ್ವಂತಕಟ್ಟಡವನ್ನು ಹೊಂದಿದ್ದು, ಯಶವಂತಪುರದಲ್ಲಿ ಪ್ರಧಾನ ಕಛೇರಿ ಹಾಗು ಕೆ.ಇ.ಸಿ ಲೇಔಟ್ ಮತ್ತು ಅಟ್ಟೂರು ಬಡಾವಣೆಯಲ್ಲಿ ಎರಡು ಶಾಖೆಗಳನ್ನು ಹೊಂದಿದ್ದು ವ್ಯವಹಾರಗಳು ಸಂಪೂರ್ಣ ಗಣಕೀಕೃತಗೊಂಡಿದೆ. ಸಂಘದ ಆಡಳಿತ ಮಂಡಳಿ ಸದಸ್ಯರ ಬದ್ಧತೆ, ಮಾರ್ಗದರ್ಶನ ಮತ್ತು ಸಿಬ್ಬಂದಿಯ ದಕ್ಷತೆಯಿಂದ ಉತ್ತಮವಾಗಿ ಕೆಲಸ ನಿರ್ವಹಿಸುತ್ತಿದೆ. ಸಂಘವು ಆಡಳಿತ ಮಂಡಳಿಯ ನಿರ್ದೇಶಕರ, ಅಧಿಕಾರಿಗಳ ಹಾಗೂ ಸಿಬ್ಬಂದಿಗಳ ಪ್ರಾಮಾಣಿಕ ಪರಿಶ್ರಮದಿಂದ ನಿರಂತರವಾಗಿ ಪ್ರಗತಿಯ ಪಥದಲ್ಲಿ ಮುನ್ನಡೆಯುತ್ತಿದ್ದು ಇತರೆ ಸಹಕಾರ ಸಂಸ್ಥೆಗಳಿಗೆ ಮಾದರಿಯಾಗಿದೆ.

**ಸಾಲದ ಸೌಲಭ್ಯ :**

- ಜಾಮೀನು ಸಾಲ ಗರಿಷ್ಠ ಮಿತಿ ರೂ. 50,000–00 ಬಡ್ಡಿಶೇ. 12%
- ವಿಶೇಷ ಜಾಮೀನು ಸಾಲ ಗರಿಷ್ಠ ಮಿತಿ ರೂ. 1,00,000–00 ಬಡ್ಡಿ ಶೇ. 12%
- ಸ್ಥಿರಾಸ್ತಿ ಆಧಾರದ ಜಾಮೀನು ಸಾಲದ ಗರಿಷ್ಠ ಮಿತಿ ರೂ. 10,00,000–00 ಬಡ್ಡಿ ಶೇ. 12%
- ಮನೆ ಕಟ್ಟಲು ಹಾಗು ವಿದ್ಯಾಬ್ಯಾಸಕ್ಕಾಗಿ ಗರಿಷ್ಠ ಮಿತಿ ರೂ. 1,50,00,000–00ಬಡ್ಡಿ ಶೇ. 9.25%
- ಅಡಮಾನ ಸಾಲ ಗರಿಷ್ಠ ಮಿತಿ ರೂ. 1,50,00,000–00 ಬಡ್ಡಿ ಶೇ.10%
- "ಬಿ" ಖಾತಾ ಸ್ಥಿರಾಸ್ತಿ ಸಾಲ ಗರಿಷ್ಠ ಮಿತಿ ರೂ.50,00,000–00 ಬಡ್ಡಿ ಶೇ.11.75%
- ಚಿನ್ನಾಭರಣ ಸಾಲ ಗರಿಷ್ಠ ಮಿತಿ ರೂ. 10,00,000–00 ಬಡ್ಡಿ ಶೇ.9.25%

| ಸಂ. | ವಿವರ | 2021–2022 |
|---|---|---|
| 1 | ಷೇರು ಬಂಡವಾಳ | 5,49,13,600–00 |
| 2 | ಆಪದ್ಧನ ನಿಧಿ | 4,12,34,740–00 |
| 3 | ಠೇವಣಿಗಳು | 82,36,24,077–62 |
| 4 | ಸಾಲದ ಮುಂಗಡಗಳು | 68,64,95,160–00 |
| 5 | ವಾರ್ಷಿಕ ವ್ಯವಹಾರ | 2,06,23,22,736–27 |
| 6 | ನಿವ್ವಳ ಲಾಭ | 1,03,54,714–13 |
| 7 | ಷೇರು ಲಾಭ | 10% |
| 8 | ಆಡಿಟ್ ದರ್ಜೆ | "ಎ" |

**ಸದಸ್ಯರಿಗೆ ನೀಡುತ್ತಿರುವ ವಿಶೇಷ ಸೌಲಭ್ಯಗಳು :**

- ಸಂಘವು ತನ್ನ ಸದಸ್ಯರಿಗೆ RTGS/NEFT/PAY ORDER ಸೌಲಭ್ಯವನ್ನು ನೀಡುತ್ತಿದೆ.
- ಸಂಘವು ಅತ್ಯುತ್ತಮವಾದ ಪಿಗ್ಮಿ ಸಂಗ್ರಹಣೆಯನ್ನು ಹೊಂದಿದೆ.
- ಸಂಘವು ಠೇವಣಿಗಳ ಮೇಲೆ ಆಕರ್ಷಕವಾದ ಬಡ್ಡಿದರವನ್ನು ನೀಡುತ್ತಿದೆ.
- ಸಂಘವು ಶಿಕ್ಷಣ ನಿಧಿಯನ್ನು ಪ್ರತಿ ವರ್ಷವು ನೀಡುತ್ತಾ ಬಂದಿದೆ.
- ಸಂಘವು ತನ್ನ ಸದಸ್ಯರಿಗೆ ಆರೋಗ್ಯ ನಿಧಿಯ ಸೌಲಭ್ಯವನ್ನು ನೀಡುತ್ತಿದೆ.
- ಸಂಘವು ತನ್ನ ಸದಸ್ಯರಿಗೆ ಭದ್ರತಾ ಕಪಾಟು ಸೌಲಭ್ಯವನ್ನು ಒದಗಿಸಿದೆ.
- ಸಂಘವು ಸ್ಟಾಂಪ್ ಪೇಪರ್ ಸೌಲಭ್ಯ ಒದಗಿಸಿದೆ.
- ಸಂಘವು ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಿದೆ.

**ನಿವ್ವಳ ಲಾಭ :** ಸಂಘವು 2021–2022ನೇ ಸಾಲಿನಲ್ಲಿ ರೂ. 1,03,54,714–13 ಲಾಭ ಗಳಿಸಿದೆ. ಸಂಘವು ಈ ವರ್ಷ ಶೇ.10%ರಂತೆ ಡಿವಿಡೆಂಡ್ ವಿತರಿಸಿದೆ.